ಸಂಪುಟ 01 । ಸಂಚಿಕೆ 187 ಸೋಮವಾರ 02 ನವೆಂಬರ್ 2026 । ಪುಟ 4 । ಬೆಲೆ–2 ರೂ.

Posting registration number : RCR/RNP/116/2026-2028

ಇರ್ಫಾನ್ ಕೆ
ಸಂಪಾದಕರು

MA ವಹಾಬ್
ಪ್ರಧಾನ ಸಂಪಾದಕರು

ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಅಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

ಈ ದಿನದ ವಿಶೇಷ

1) ಆಲ್ ಸೌಲ್ಸ್ ಡೇ (All Souls' Day – ಎಲ್ಲಾ ಆತ್ಮಗಳ ದಿನ): ಇದು ಕ್ರಿಶ್ಚಿಯನ್ ಸಮುದಾಯದ ಪ್ರಮುಖ ದಿನವಾಗಿದೆ. ಈ ದಿನದಂದು ಅಗಲಿದ ತಂದೆ–ತಾಯಿ, ಬಂಧು–ಮಿತ್ರರು ಹಾಗೂ ಎಲ್ಲಾ ನಂಬಿಕಸ್ಥ ಆತ್ಮಗಳ ನೆನಪಿಗಾಗಿ ವಿಶೇಷ ಪ್ರಾರ್ಥನೆಗಳನ್ನು ಸಲ್ಲಿಸಲಾಗುತ್ತದೆ ಮತ್ತು ಅವರ ಸಮಾಧಿಗಳಿಗೆ ಭೇಟಿ ನೀಡಿ ಮೇಣದಬತ್ತಿ ಹಚ್ಚಿ ಗೌರವ ಸಲ್ಲಿಸಲಾಗುತ್ತದೆ.

2) ಪತ್ರಕರ್ತರ ಮೇಲಿನ ಅಪರಾಧಗಳ ನಿರ್ಭಯತೆ ಕೊನೆಗೊಳಿಸುವ ಅಂತರರಾಷ್ಟ್ರೀಯ ದಿನ (International Day to End Impunity for Crimes Against Journalists): ಪತ್ರಕರ್ತರ ಸುರಕ್ಷತೆಯನ್ನು ಖಾತ್ರಿಪಡಿಸಲು ಮತ್ತು ಅವರ ವಿರುದ್ಧ ನಡೆಯುವ ದೌರ್ಜನ್ಯಗಳ ವಿರುದ್ಧ ಜಾಗೃತಿ ಮೂಡಿಸಲು ವಿಶ್ವಸಂಸ್ಥೆಯು ಈ ದಿನವನ್ನು ಆಚರಿಸುತ್ತದೆ.

3)ವಿಶ್ವ ಬ್ಯಾಲೆ ದಿನ (World Ballet Day): ನೃತ್ಯ ಪ್ರಕಾರವಾದ ಬ್ಯಾಲೆ (Ballet) ಕಲೆಯ ಮಹತ್ವವನ್ನು ಸಾರಲು ಜಾಗತಿಕವಾಗಿ ಈ ದಿನವನ್ನು ಆಚರಿಸಲಾಗುತ್ತದೆ.

4)ಅನೌಪಚಾರಿಕ ವಲಯದ ಮಹಿಳಾ ಕಾರ್ಮಿಕರ ಅಂತರರಾಷ್ಟ್ರೀಯ ದಿನ: ಭಾರತದ ಪ್ರಸಿದ್ಧ ಸಾಮಾಜಿಕ ಕಾರ್ಯಕರ್ತೆ ಎಲಾಬೆನ್ ಭಟ್ ಅವರ ಗೌರವಾರ್ಥವಾಗಿ ಅನೌಪಚಾರಿಕ ವಲಯದಲ್ಲಿ ದುಡಿಯುವ ಮಹಿಳೆಯರ ಶ್ರಮವನ್ನು ಗುರುತಿಸಲು ಈ ದಿನವನ್ನು ಮೀಸಲಿಡಲಾಗಿದೆ.

5) ಶಾಹರುಖ್ ಖಾನ್ (Shah Rukh Khan): ಬಾಲಿವುಡ್‌ನ "ಬಾದ್‌ಶಾ" ಎಂದೇ ಖ್ಯಾತರಾಗಿರುವ ಭಾರತೀಯ ಚಿತ್ರರಂಗದ ಪ್ರಸಿದ್ಧ ನಟ ಶಾಹರುಖ್ ಖಾನ್ ಅವರು ನವೆಂಬರ್ 2, 1965 ರಂದು ಜನಿಸಿದರು.

ಸುಭಾಷಿತ

ಅಸೂಯೆ, ಅಹಂಕಾರ ಮತ್ತು ದ್ವೇಷಗಳಿಂದ ನಮ್ಮ ಮನಸ್ಸನ್ನು ಕೆಡಿಸಬಾರದು. ಅಂತರಂಗವನ್ನು ಸ್ವಚ್ಛಗೊಳಿಸಿದರೆ ಮಾತ್ರ ಅಮೃತ ಫಲ ಪಡೆಯಲು ಸಾಧ್ಯ.

–ಶ್ರೀ ಸಿದ್ಧೇಶ್ವರ ಸ್ವಾಮೀಜಿ

ಕರವೇ ವತಿಯಿಂದ ಕನ್ನಡ ರಾಜ್ಯೋತ್ಸವ ಆಚರಣೆ

ನೈಜ್ಯ ದೆಸೆ ನ್ಯೂಸ್



ತಾಳಿಕೋಟಿ: ಪಟ್ಟಣದ ಅಂಬೇಡ್ಕರ್ ವೃತ್ತದ ಬಳಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ 71ನೇ ಕನ್ನಡ ರಾಜ್ಯೋತ್ಸವವನ್ನು ಸಡಗರ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿದ ತಹಸೀಲ್ದಾರ್ ಎಂ.ಎಸ್. ಅರಕೇರಿ ಮಾತನಾಡಿ, ಕನ್ನಡ ನಾಡು, ನುಡಿ, ನೆಲ, ಜಲ ಹಾಗೂ ಸಂಸ್ಕೃತಿಯ ಸಂರಕ್ಷಣೆಯಲ್ಲಿ ಕನ್ನಡಪರ ಸಂಘಟನೆಗಳ ಪಾತ್ರ ಮಹತ್ವದ್ದಾಗಿದೆ. ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆಗಾಗಿ ಪ್ರತಿಯೊಬ್ಬರೂ ಕೈಜೋಡಿಸುವ ಮೂಲಕ ಭಾಷೆಯ ರಕ್ಷಣೆಗೆ ಬದ್ಧರಾಗಬೇಕು ಎಂದು ಕರೆ ನೀಡಿದರು.ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಪಿಎಸ್‌ಐ ಜ್ಯೋತಿ ಕೋತ್ ಹಾಗೂ ಹಿರಿಯ ಪತ್ರಕರ್ತ ಜಿ.ಟಿ. ಗೋರ್ಪಡೆ ಅವರು ಮಾತನಾಡಿ, ಕರ್ನಾಟಕ ರಕ್ಷಣಾ ವೇದಿಕೆ ಕನ್ನಡ ಭಾಷೆಯ ಬಗ್ಗೆ ಹೊಂದಿರುವ ಬದ್ಧತೆ ಹಾಗೂ ಕನ್ನಡ ನಾಡಿನ ಸೇವೆಗಾಗಿ ನಡೆಸುತ್ತಿರುವ ಕಾರ್ಯಚಟುವಟಿಕೆಗಳನ್ನು ಶ್ಲಾಘಿಸಿದರು.ಕರವೇ ಜಿಲ್ಲಾ ಉಪಾಧ್ಯಕ್ಷ ಜೈಭೀಮ್ ಮುತ್ತಗಿ ಪ್ರಾಸ್ತಾವಿಕವಾಗಿ ಮಾತನಾಡಿ, ಸಂಘಟನೆಯ ಉದ್ದೇಶ ಹಾಗೂ ಕನ್ನಡ ಭಾಷೆಯ ಸಂರಕ್ಷಣೆಗೆ ಕೈಗೊಳ್ಳುತ್ತಿರುವ ಕಾರ್ಯಗಳ ಕುರಿತು ವಿವರಿಸಿದರು.ಕಾರ್ಯಕ್ರಮದಲ್ಲಿ ಪುರಸಭೆ ಮಾಜಿ ಸದಸ್ಯ ಇಬ್ರಾಹಿಂ ಮನ್ನೂರ, ಪುರಸಭೆ ಆರೋಗ್ಯ ನಿರೀಕ್ಷಕ ಫಿರೋಜ್ ಮುಲ್ಲಾ, ಕರ್ನಾಟಕ ರಕ್ಷಣಾ ವೇದಿಕೆಯ ನಿಸಾರ್ ಬೇಪಾರಿ, ಅಬೂಬಕರ್ ಲಾಹೋರಿ, ನಬಿರಸೂಲ ಲಾಹೋರಿ, ಜಾಕೀರ ಬಡಗಣ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಹಾಗೂ ಕನ್ನಡಾಭಿಮಾನಿಗಳು ಉಪಸ್ಥಿತರಿದ್ದರು.

ಸನ್‌ರೈಸ್ ಶಿಕ್ಷಣ ಸಂಸ್ಥೆಯಲ್ಲಿ ಸಂಭ್ರಮದ ಕನ್ನಡ ರಾಜ್ಯೋತ್ಸವ ಆಚರಣೆ

ಕನ್ನಡ ನಾಡು, ನುಡಿ, ಭಾಷೆ ಮತ್ತು ಸಂಸ್ಕೃತಿಯ ಸಂರಕ್ಷಣೆ ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯ – ಲಾಜರ್ ಸಿರಿಲ್

ನೈಜ್ಯ ದೆಸೆ ನ್ಯೂಸ್







ಸಿಂಧನೂರು: ನಗರದ ಸನ್‌ರೈಸ್ ಕಾನೂನು (Law), ಡಿ–ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜುಗಳ ಸಂಯುಕ್ತ ಆಶ್ರಯದಲ್ಲಿ ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ಸಂಭ್ರಮ, ಸಡಗರ ಹಾಗೂ ಕನ್ನಡಾಭಿಮಾನದಿಂದ ಆಚರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಸಂಸ್ಥೆಯ ಆವರಣದಲ್ಲಿ ರಾಷ್ಟ್ರಕವಿ ಕುವೆಂಪು ಅವರ ಆಶಯದಂತೆ ಕನ್ನಡ ನಾಡು, ನುಡಿ, ಭಾಷೆ ಮತ್ತು ಸಂಸ್ಕೃತಿಯ ಮಹತ್ವವನ್ನು ಸಾರುವ ವಾತಾವರಣ ನಿರ್ಮಿಸಲಾಗಿತ್ತು. ಸಂಸ್ಥೆಯ ಗೌರವಾಧ್ಯಕ್ಷರಾದ ಶ್ರೀ ಖಾಜಾ ಮೋಹಿನುದ್ದೀನ್ ಅತ್ತಾರ್ ಅವರು ಧ್ವಜಾರೋಹಣ ನೆರವೇರಿಸುವ ಮೂಲಕ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.ನಂತರ ಮಾತನಾಡಿದ ಸನ್‌ರೈಸ್ ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್ ಅವರು, ಕನ್ನಡ ಭಾಷೆಯು ಸಾವಿರಾರು ವರ್ಷಗಳ ಇತಿಹಾಸ, ಶ್ರೀಮಂತ ಸಾಹಿತ್ಯ ಪರಂಪರೆ ಹಾಗೂ ವೈವಿಧ್ಯಮಯ ಸಂಸ್ಕೃತಿಯನ್ನು ಹೊಂದಿರುವ ಹೆಮ್ಮೆಯ ಭಾಷೆಯಾಗಿದೆ. ಕನ್ನಡ ನಾಡು ಅನೇಕ ಮಹನೀಯರು, ಸಾಹಿತಿಗಳು, ಕವಿಗಳು, ಸಂತರು ಹಾಗೂ ಹೋರಾಟಗಾರರ ಕೊಡುಗೆಯಿಂದ ಸಮೃದ್ಧವಾಗಿದೆ. ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆ ಕೇವಲ ಸರ್ಕಾರದ ಜವಾಬ್ದಾರಿಯಲ್ಲ, ಪ್ರತಿಯೊಬ್ಬ ಕನ್ನಡಿಗನ ಆದ್ಯ ಕರ್ತವ್ಯವಾಗಿದೆ ಎಂದು ಹೇಳಿದರು.ವಿದ್ಯಾರ್ಥಿಗಳು ತಮ್ಮ ದೈನಂದಿನ ಜೀವನದಲ್ಲಿ ಕನ್ನಡ ಭಾಷೆಯನ್ನು ಹೆಚ್ಚಾಗಿ ಬಳಸುವುದರ ಜೊತೆಗೆ ಕನ್ನಡ ಸಾಹಿತ್ಯ, ಕಲೆ, ಸಂಸ್ಕೃತಿ ಹಾಗೂ ಪರಂಪರೆಯನ್ನು ಅರಿತುಕೊಳ್ಳಬೇಕು. ಮಾತೃಭಾಷೆಯ ಮೇಲಿನ ಅಭಿಮಾನವನ್ನು ಬೆಳೆಸಿಕೊಂಡು, ಇತರ ಭಾಷೆಗಳಿಗೂ ಗೌರವ ನೀಡುವ ಮನೋಭಾವ ಬೆಳೆಸಿಕೊಳ್ಳಬೇಕು. ಕನ್ನಡ ನಾಡಿನ ಇತಿಹಾಸ, ಸಂಸ್ಕೃತಿ ಹಾಗೂ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವಲ್ಲಿ ವಿದ್ಯಾರ್ಥಿಗಳ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.ಶಿಕ್ಷಣ ಸಂಸ್ಥೆಗಳು ಕೇವಲ ಶೈಕ್ಷಣಿಕ ಜ್ಞಾನ ನೀಡುವ ಕೇಂದ್ರಗಳಾಗಿರದೆ, ವಿದ್ಯಾರ್ಥಿಗಳಲ್ಲಿ ನಾಡು, ನುಡಿ, ಸಂಸ್ಕೃತಿ, ದೇಶಪ್ರೇಮ ಹಾಗೂ ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸುವ ಕೇಂದ್ರಗಳಾಗಬೇಕು. ಈ ನಿಟ್ಟಿನಲ್ಲಿ ಕನ್ನಡ ರಾಜ್ಯೋತ್ಸವದಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳಲ್ಲಿ ಭಾಷಾಭಿಮಾನ ಮತ್ತು ನಾಡಿನ ಬಗ್ಗೆ ಗೌರವವನ್ನು ಹೆಚ್ಚಿಸಲು ಸಹಕಾರಿಯಾಗುತ್ತವೆ ಎಂದರು.ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿಗಳಾದ ಇರ್ಷಾದ್ ಕೆ., ನರ್ಸಿಂಗ್ ಕಾಲೇಜಿನ ಪ್ರಾಚಾರ್ಯರಾದ ಲಾಜರ್ ಸಿರಿಲ್, ಕಾನೂನು, ಡಿ–ಫಾರ್ಮಸಿ, ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ವಿಭಾಗಗಳ ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕನ್ನಡ ರಾಜ್ಯೋತ್ಸವದ ಸಂಭ್ರಮದಲ್ಲಿ ಭಾಗವಹಿಸಿದರು.ಕನ್ನಡ ನಾಡಿನ ಏಕತೆ, ಭಾಷಾಭಿಮಾನ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಸಾರುವ ಈ ಕಾರ್ಯಕ್ರಮವು ಸಂಸ್ಥೆಯ ಆವರಣದಲ್ಲಿ ಕನ್ನಡದ ಕಂಪನ್ನು ಪಸರಿಸಿತು. ಕನ್ನಡ ಭಾಷೆಯ ಬಗ್ಗೆ ಗೌರವ, ಅಭಿಮಾನ ಮತ್ತು ಪ್ರೀತಿಯನ್ನು ಪ್ರತಿಯೊಬ್ಬರ ಮನದಲ್ಲೂ ಮೂಡಿಸುವ ಸಂದೇಶದೊಂದಿಗೆ ಕಾರ್ಯಕ್ರಮ ಅರ್ಥಪೂರ್ಣವಾಗಿ ನೆರವೇರಿತು.

ತಾಳಿಕೋಟಿಯಲ್ಲಿ 71ನೇ ಕನ್ನಡ ರಾಜ್ಯೋತ್ಸವದ ಸಂಭ್ರಮ

ನೈಜ್ಯ ದೆಸೆ ನ್ಯೂಸ್



ತಾಳಿಕೋಟಿ: ಪಟ್ಟಣದಲ್ಲಿ 71ನೇ ಕನ್ನಡ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ನಗರದ ಕನ್ನಡ ಸರ್ಕಾರಿ ಶಾಲೆಯ ಆವರಣದಲ್ಲಿ ಬೆಳಿಗ್ಗೆ ತಹಸೀಲ್ದಾರ್ ಎಂ.ಎಸ್. ಅರಕೇರಿ ಅವರು ಧ್ವಜಾರೋಹಣ ನೆರವೇರಿಸಿ, ತಾಯಿ ಭುವನೇಶ್ವರಿಯ ಭಾವಚಿತ್ರದ ಭವ್ಯ ಮೆರವಣಿಗೆಗೆ ಚಾಲನೆ ನೀಡಿದರು.ವಿವಿಧ ವಾದ್ಯಮೇಳಗಳ ನಾದದೊಂದಿಗೆ ಸಾಗಿದ ಮೆರವಣಿಗೆಯಲ್ಲಿ ಡಿಜೆ ಮೂಲಕ ಮೊಳಗಿದ 'ಹುಟ್ಟಿದರೆ ಕನ್ನಡ ನಾಡಿನಲ್ಲಿ ಹುಟ್ಟಬೇಕು' ಗೀತೆಗೆ ನೂರಾರು ಯುವಕರು ಹಾಗೂ ಶಾಲಾ ವಿದ್ಯಾರ್ಥಿಗಳು ಹೆಜ್ಜೆ ಹಾಕಿ ಸಂಭ್ರಮಿಸಿದರು. ಸ್ಥಳೀಯ ಸಾರಿಗೆ ಘಟಕದ ವತಿಯಿಂದ ಕನ್ನಡ ನಾಡು, ನುಡಿ ಹಾಗೂ ಸಂಸ್ಕೃತಿಯನ್ನು ಬಿಂಬಿಸುವ ಸ್ಟಿಕ್ಕರ್‌ಗಳಿಂದ ವಿಶೇಷವಾಗಿ ಅಲಂಕರಿಸಲಾದ ಬಸ್ ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಿತ್ತು. ಪಟ್ಟಣದಾದ್ಯಂತ ಕನ್ನಡ ಧ್ವಜಗಳು ರಾರಾಜಿಸಿ ಕನ್ನಡದ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿದ ಮೆರವಣಿಗೆ ಬಳಿಕ ಕನ್ನಡ ಶಾಲೆಯ ಆವರಣದಲ್ಲಿ ವೇದಿಕೆ ಕಾರ್ಯಕ್ರಮ ಜರುಗಿತು. ವಂದೇ ಮಾತರಂ ಹಾಗೂ ನಾಡಗೀತೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.ವಿಶೇಷ ಉಪನ್ಯಾಸಕರಾಗಿ ಆಗಮಿಸಿದ್ದ ಶಿಕ್ಷಕ ಡಾ. ಅನೀಲಕುಮಾರ ಇರಾಜ್ ಹಾಗೂ ಕ್ಷೇತ್ರ ಸಮನ್ವಯಾಧಿಕಾರಿ ದಮ್ಮೂರಮಠ ಅವರು ಕನ್ನಡ ಭಾಷೆಯ ಹಿರಿಮೆ, ನಾಡಿನ ಸಂಸ್ಕೃತಿ ಮತ್ತು ಕನ್ನಡ ನುಡಿಯ ಮಹತ್ವದ ಕುರಿತು ಅರ್ಥಪೂರ್ಣವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ವಿಷಯದಲ್ಲಿ 125ಕ್ಕೆ 125 ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.ಬಿರಾದಾರ ಸಂಗೀತ ಶಾಲೆಯ ವಿದ್ಯಾರ್ಥಿಗಳು ಕನ್ನಡ ನಾಡು–ನುಡಿಯ ಕುರಿತಾದ ಗೀತೆಗಳನ್ನು ಪ್ರಸ್ತುತಪಡಿಸಿ ಕನ್ನಡಾಭಿಮಾನವನ್ನು ಮೆರೆದರು. ಪುಟ್ಟ ಬಾಲಕಿ ರೂಪಾ ಅಸ್ಕಿ ಅವರು ರಾಜ್ಯೋತ್ಸವದ ಕುರಿತು ಮಾಡಿದ ಕಿರು ಭಾಷಣ ಸಭಿಕರ ಮೆಚ್ಚುಗೆಗೆ ಪಾತ್ರವಾಯಿತು. ಒಟ್ಟಾರೆ ಪಟ್ಟಣದಾದ್ಯಂತ ಕನ್ನಡ ರಾಜ್ಯೋತ್ಸವದ ಸಂಭ್ರಮ ಮನೆಮಾಡಿತ್ತು.ಕಾರ್ಯಕ್ರಮದಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಅನಸೂಯಾ ಚಲವಾದಿ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಆರ್.ಎಲ್. ಕೊಪ್ಪದ, ಪಿಎಸ್‌ಐ ಜ್ಯೋತಿ ಕೋತ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಸಂಗಮೇಶ ದೇಸಾಯಿ, ನಿವೃತ್ತ ಪೊಲೀಸ್ ವರಿಷ್ಠಾಧಿಕಾರಿ ಎಸ್.ಬಿ. ಕಟ್ಟಿಮನಿ, ಪಿಎಸ್‌ಐ ಎಸ್.ಎಂ. ಪಡಶೆಟ್ಟಿ, ಸಿಆರ್‌ಸಿ ರಾಜು ವಿಜಾಪುರ, ಆಡಳಿತ ವೈದ್ಯಾಧಿಕಾರಿ ಡಾ. ಎ.ಜಿ. ಬಿರಾದಾರ, ಎ.ಓ. ಮಹೇಶ ಜೋಶಿ, ಪುರಸಭೆಯ ಶ್ರೀಪಾದ ಜೋಶಿ, ವ್ಯವಸ್ಥಾಪಕ ಇಂಜಗನೇರಿ ಸೇರಿದಂತೆ ಕಾಶಿನಾಥ ಮುರಾಳ, ಎಂ.ಎಸ್. ಸರಶಟ್ಟಿ, ಗಂಗಾಧರ ಕಸ್ತೂರಿ, ಶಿವಶಂಕರ ಹಿರೇಮಠ, ಸಂಗನಗೌಡ ಅಸ್ಕಿ, ಕರವೇ ಜಿಲ್ಲಾ ಉಪಾಧ್ಯಕ್ಷ ಜೈಭೀಮ್ ಮುತ್ತಗಿ, ಡಾ. ನಜೀರ ಕೋಳ್ಯಾಳ, ಮಹಾಂತೇಶ ಮುರಾಳ, ಮಂಜುನಾಥ ಶೆಟ್ಟಿ, ಪ್ರಕಾಶ ಸಾಸಾಬಾಳ, ನಿಂಗಣ್ಣ ಕುಂಟೋಜಿ, ಮುನ್ನಾ ಅತ್ತಾರ, ಮೆಹಬೂಬ ಮೂಕಿಹಾಳ, ವಿವಿಧ ಸಂಘಟನೆಗಳ ಪದಾಧಿಕಾರಿಗಳು, ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ತಾಲೂಕು ಮಟ್ಟದ ಅಧಿಕಾರಿಗಳು, ವಿವಿಧ ಪಕ್ಷಗಳ ಮುಖಂಡರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾದಲ್ಲಿ ಕನ್ನಡ ರಾಜ್ಯೋತ್ಸವ ಸಂಭ್ರಮಾಚರಣೆ

ನೈಜ್ಯ ದೆಸೆ ನ್ಯೂಸ್



ಜವಳಗೇರಾ, ನವೆಂಬರ್ 1: ಪ್ರಾಥಮಿಕ ಆರೋಗ್ಯ ಕೇಂದ್ರ ಜವಳಗೇರಾದಲ್ಲಿ 70ನೇ ಕನ್ನಡ ರಾಜ್ಯೋತ್ಸವ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಡಾ. ಪ್ರೀತಾ ಪಾಟೀಲ್ ಅವರು ಕನ್ನಡ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ಪ್ರತಿವರ್ಷ ನವೆಂಬರ್ 1ರಂದು ಆಚರಿಸಲಾಗುವ ಕನ್ನಡ ರಾಜ್ಯೋತ್ಸವವು ಕನ್ನಡಿಗರ ಹೆಮ್ಮೆ, ಅಭಿಮಾನಮತ್ತು ಏಕತೆಯ ಸಂಕೇತವಾದ ನಾಡಹಬ್ಬವಾಗಿದೆ ಎಂದು ತಿಳಿಸಿದರು.ನಂತರ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಾಲಪ್ಪ ನಾಯಕ ಅವರು ಮಾತನಾಡಿ, ಕನ್ನಡ ರಾಜ್ಯೋತ್ಸವದಇತಿಹಾಸ ಮತ್ತು ಕರ್ನಾಟಕ ಏಕೀಕರಣದ ಮಹತ್ವವನ್ನು ವಿವರಿಸಿದರು.ಸ್ವಾತಂತ್ರ್ಯ ಪೂರ್ವದಲ್ಲಿ ಕನ್ನಡ ಮಾತನಾಡುವ ಪ್ರದೇಶಗಳು ಮದ್ರಾಸ್, ಬಾಂಬೆ, ಹೈದರಾಬಾದ್ ಪ್ರಾಂತ್ಯಗಳು ಹಾಗೂ ಮೈಸೂರು ಸಂಸ್ಥಾನಗಳಲ್ಲಿ ಹರಿದು ಹಂಚಿಹೋಗಿದ್ದವು. ಕನ್ನಡ ಮಾತನಾಡುವ ಎಲ್ಲ ಪ್ರದೇಶಗಳನ್ನು ಒಂದೇ ಆಡಳಿತದಡಿ ತರಬೇಕೆಂಬ ಉದ್ದೇಶದಿಂದ 1905ರಲ್ಲಿ ಆಲೂರು ವೆಂಕಟರಾಯರು ಸೇರಿದಂತೆ ಹಲವು ಕನ್ನಡಪರ ಹೋರಾಟಗಾರರ ಪ್ರಯತ್ನದಿಂದ ಕರ್ನಾಟಕ ಏಕೀಕರಣ ಚಳವಳಿಗೆ ಬಲ ದೊರೆಯಿತು.1956ರ ನವೆಂಬರ್ 1ರಂದು ಭಾಷಾವಾರು ಪ್ರಾಂತ್ಯಗಳ ಪುನರ್‌ವಿಂಗಡಣೆಯ ಪರಿಣಾಮವಾಗಿ ಕನ್ನಡ ಮಾತನಾಡುವ ಪ್ರದೇಶಗಳು ವಿಲೀನಗೊಂಡು ಮೈಸೂರು ರಾಜ್ಯ ಅಸ್ತಿತ್ವಕ್ಕೆ ಬಂದಿತು. ನಂತರ 1973ರ ನವೆಂಬರ್ 1ರಂದು ಅಂದಿನ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರ ಆಡಳಿತಾವಧಿಯಲ್ಲಿ ಮೈಸೂರು ರಾಜ್ಯಕ್ಕೆಅಧಿಕೃತವಾಗಿ 'ಕರ್ನಾಟಕ' ಎಂದು ನಾಮಕರಣ ಮಾಡಲಾಯಿತು ಎಂದು ತಿಳಿಸಿದರು.ಕನ್ನಡ ಭಾಷೆ, ನಾಡು, ನುಡಿ, ಸಂಸ್ಕೃತಿ ಮತ್ತು ಪರಂಪರೆಯನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯವಾಗಿದೆ. ಕನ್ನಡಿಗರೆಲ್ಲರೂ ಭಾಷಾಭಿಮಾನ ಬೆಳೆಸಿಕೊಂಡು ಕನ್ನಡದ ಗೌರವವನ್ನು ಎತ್ತಿಹಿಡಿಯಬೇಕು ಎಂದು ಕರೆ ನೀಡಿದರು.ನಂತರ ಚನ್ನಬಸವ ಅವರು ಮಾತನಾಡಿ, ಕನ್ನಡ ನಾಡಿನ ಇತಿಹಾಸ, ಸಂಸ್ಕೃತಿ ಹಾಗೂ ಪರಂಪರೆಯ ಮಹತ್ವವನ್ನು ವಿವರಿಸಿದರು. ಕನ್ನಡ ಭಾಷೆಯನ್ನು ದೈನಂದಿನ ಜೀವನದಲ್ಲಿ ಹೆಚ್ಚು ಬಳಸುವ ಮೂಲಕ ಕನ್ನಡದ ಬೆಳವಣಿಗೆಗೆ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಶುಶ್ರೂಷಕಾಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು, ದ್ವಿತೀಯ ದರ್ಜೆ ಸಹಾಯಕರು, ಪ್ರಯೋಗಶಾಲಾ ತಂತ್ರಜ್ಞರು ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳು.ಆಶಾ ಕಾರ್ಯಕರ್ತೆಯರು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರದ ಎಲ್ಲಾ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

ಸಾಹಿತ್ಯ ಸಿಂಚನ

ಕಳೆದುಹೋದ ನಗುವಿನ ಹುಡುಕಾಟ

ಕನ್ನಡಿ ಮುಂದೆ ನಿಂತಾಗ ಇಂದು,
ಮುಖವಿದೆ ಆದರೆ ನಗು ಕಾಣದು,
ಕಣ್ಣಿನಲ್ಲಿ ಸಾವಿರ ಮಾತಿದ್ದರೂ,
ಮನದ ನೋವು ಮಾತ್ರ ಹೊರಬರದು.

ಒಮ್ಮೆ ಸಣ್ಣ ಕ್ಷಣವೂ ಸಾಕಾಗಿತ್ತು,
ತುಟಿಗಳ ಮೇಲೆ ನಗು ಮೂಡಿಸಲು,
ಇಂದು ಸಾವಿರ ಕಾರಣಗಳಿದ್ದರೂ,
ಮನಸ್ಸು ಸಿದ್ಧವಿಲ್ಲ ನಗಲು.

ಹಳೆಯ ದಿನಗಳ ದಾರಿಯಲ್ಲಿ ನಡೆದು,
ಮರೆತ ಸಂತೋಷವ ಹುಡುಕುತ್ತೇನೆ,
ಬಾಲ್ಯದ ಆ ಮುಗ್ಧ ನಗುವನ್ನು,
ನೆನಪುಗಳ ನಡುವೆ ಕರೆಯುತ್ತೇನೆ.

ಕಳೆದುಹೋದ ಕ್ಷಣಗಳು ಹೇಳುತ್ತವೆ,
"ನಿನ್ನ ನಗು ಇನ್ನೂ ನಿನ್ನೊಳಗಿದೆ,"
ಮನದ ಬಾಗಿಲು ತೆರೆದು ನೋಡಿದರೆ,
ಅದು ಮೌನದ ಹಿಂದೆ ಅಡಗಿದೆ.

ಕಣ್ಣೀರಿನ ಹನಿಗಳ ನಡುವೆ ಕೂಡ,
ಒಂದು ಪುಟ್ಟ ಭರವಸೆ ಉಳಿದಿದೆ,
ಕತ್ತಲಾದ ಈ ಬದುಕಿನ ದಾರಿಯಲ್ಲಿ,
ಹೊಸ ನಗುವಿನ ಬೆಳಕು ಕಾದಿದೆ.

ನಿನ್ನೆ ಕಳೆದುಕೊಂಡ ನಗುವಿಗಾಗಿ,
ಇಂದು ಹುಡುಕಾಟ ಮುಂದುವರಿಯಲಿ,
ನಾಳೆಯ ಹೊಸ ಪ್ರಭಾತದೊಂದಿಗೆ,
ನನ್ನ ನಗು ಮತ್ತೆ ಅರಳಲಿ.

ಸಿರವಾರ ಸಾರ್ವಜನಿಕ ಗ್ರಂಥಾಲಯ ಕಟ್ಟಡದ –80 ಲಕ್ಷ ಅನುದಾನದ ಬಳಕೆ ಕುರಿತು ಉನ್ನತ ಮಟ್ಟದ ತನಿಖೆಗೆ ಆಗ್ರಹ!

❑ ನೈಜ್ಯ ದೆಸೆ ನ್ಯೂಸ್



ಸಿರವಾರ: ಪಟ್ಟಣದ ಸಾರ್ವಜನಿಕರಿಗೆ ಅನುಕೂಲವಾಗುವಂತೆ ನಿರ್ಮಿಸಬೇಕಾದ ಸಾರ್ವಜನಿಕ ಗ್ರಂಥಾಲಯ ಕಟ್ಟಡಕ್ಕೆ ಮಂಜೂರಾಗಿರುವ ₹80 ಲಕ್ಷ ಅನುದಾನದ ಬಳಕೆಯ ಕುರಿತು ಇದೀಗ ಗಂಭೀರ ಪ್ರಶ್ನೆಗಳು ಉದ್ಭವಿಸಿವೆ. ಎರಡು ಪ್ರತ್ಯೇಕ ಯೋಜನೆಗಳಡಿ ಒಂದೇ ಉದ್ದೇಶಕ್ಕಾಗಿ ಅನುದಾನ ಮಂಜೂರಾಗಿರುವ ಹಿನ್ನೆಲೆಯಲ್ಲಿ, ಕಾಮಗಾರಿ ವಾಸ್ತವವಾಗಿ ನಡೆದಿದೆಯೇ? ಮಂಜೂರಾದ ಹಣ ಎಷ್ಟು ಖರ್ಚಾಗಿದೆ? ಕಟ್ಟಡ ನಿರ್ಮಾಣ ಪೂರ್ಣಗೊಂಡಿದೆಯೇ? ಎಂಬ ಹಲವು ಪ್ರಶ್ನೆಗಳಿಗೆ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಸ್ಪಷ್ಟ ಉತ್ತರ ನೀಡಬೇಕೆಂದು ವಕೀಲ ಅನಿಲಕುಮಾರ್ ಹೊನ್ನಟಗಿ ಅವರು ರಾಜ್ಯದ ಉನ್ನತ ಮಟ್ಟದ ಅಧಿಕಾರಿಗಳಿಗೆ ದೂರು ಸಲ್ಲಿಸಿದ್ದಾರೆ.ಸಿರವಾರ ಪಟ್ಟಣದಲ್ಲಿ ಸಾರ್ವಜನಿಕ ಗ್ರಂಥಾಲಯ ಕಟ್ಟಡ ನಿರ್ಮಾಣಕ್ಕಾಗಿ 2021–22ನೇ ಸಾಲಿನಲ್ಲಿ ಸಾರ್ವಜನಿಕ ಗ್ರಂಥಾಲಯ ಇಲಾಖೆಯಿಂದ ₹30 ಲಕ್ಷ ಅನುದಾನ ಮಂಜೂರಾಗಿತ್ತು. ಈ ಮೊತ್ತವನ್ನು 2021ರ ಅಕ್ಟೋಬರ್ 26ರಂದು ಪಾವತಿಸಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ. ನಂತರ 2025ರಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ, ಕಲಬುರಗಿ ವತಿಯಿಂದ ಇದೇ ಸಾರ್ವಜನಿಕ ಗ್ರಂಥಾಲಯ ಕಟ್ಟಡ ನಿರ್ಮಾಣದ ಉದ್ದೇಶಕ್ಕಾಗಿ ₹50 ಲಕ್ಷ ಅನುದಾನ ಮಂಜೂರಾಗಿದೆ. ಈ ಪೈಕಿ ₹20 ಲಕ್ಷ ಪಾವತಿಸಲಾಗಿದೆ ಎಂದು ದೂರಿನಲ್ಲಿ ತಿಳಿಸಲಾಗಿದೆ.ಹೀಗೆ ಒಟ್ಟು ₹80 ಲಕ್ಷ ಅನುದಾನ ಮಂಜೂರಾಗಿರುವುದರಿಂದ ಸಾರ್ವಜನಿಕ ವಲಯದಲ್ಲಿ ಹಲವು ಅನುಮಾನಗಳು ವ್ಯಕ್ತವಾಗುತ್ತಿವೆ. ಮೊದಲ ಹಂತದಲ್ಲಿ ಮಂಜೂರಾದ ₹30 ಲಕ್ಷದಲ್ಲಿ ಯಾವ ಪ್ರಮಾಣದ ಕಾಮಗಾರಿ ನಡೆದಿದೆ? ಕಟ್ಟಡ ನಿರ್ಮಾಣ ಪೂರ್ಣಗೊಂಡಿದ್ದರೆ ಮತ್ತೆ ₹50 ಲಕ್ಷ ಅನುದಾನ ಏಕೆ ಮಂಜೂರಾಯಿತು? ಎರಡನೇ ಯೋಜನೆಯಡಿ ಹೊಸದಾಗಿ ಯಾವ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ? ಎರಡೂ ಯೋಜನೆಗಳ ಅಂದಾಜುಪಟ್ಟಿ ಮತ್ತು ಕಾಮಗಾರಿಯ ಸ್ವರೂಪ ಒಂದೇ ಆಗಿದೆಯೇ? ಎಂಬುದನ್ನು ಅಧಿಕಾರಿಗಳು ದಾಖಲೆ ಸಮೇತ ಪರಿಶೀಲಿಸಬೇಕಾಗಿದೆ ಎಂದು ದೂರುದಾರರು ಒತ್ತಾಯಿಸಿದ್ದಾರೆ.ಒಂದೇ ಅನುಷ್ಠಾನ ಸಂಸ್ಥೆಗೆ ಎರಡು ಕಾಮಗಾರಿಗಳ ಹೊಣೆ!ಎರಡೂ ಯೋಜನೆಗಳ ಕಾಮಗಾರಿಗಳನ್ನು ಒಂದೇ ಅನುಷ್ಠಾನ ಸಂಸ್ಥೆಗೆ ವಹಿಸಿರುವುದು ತನಿಖೆಯ ದೃಷ್ಟಿಯಿಂದ ಪ್ರಮುಖ ಅಂಶವಾಗಿದೆ. ಎರಡು ಯೋಜನೆಗಳಡಿ ಪ್ರತ್ಯೇಕವಾಗಿ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದೆಯೇ ಅಥವಾ ಮೊದಲ ಯೋಜನೆಯಲ್ಲಿಯೇ ಕೈಗೊಂಡ ಕಾಮಗಾರಿಯನ್ನು ಎರಡನೇ ಯೋಜನೆಯಲ್ಲಿಯೂ ತೋರಿಸಲಾಗಿದೆಯೇ ಎಂಬುದನ್ನು ಪರಿಶೀಲಿಸುವ ಅಗತ್ಯವಿದೆ. ಒಂದೇ ಕಾಮಗಾರಿಗೆ ಎರಡು ಬಾರಿ ಬಿಲ್ ಸಿದ್ಧಪಡಿಸಿ ಹಣ ಪಾವತಿಸಿರುವ ಸಾಧ್ಯತೆ ಇದ್ದರೆ ಅದನ್ನು ದಾಖಲೆಗಳ ಮೂಲಕ ಪತ್ತೆಹಚ್ಚಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ. ಎಂ.ಬಿ. ದಾಖಲೆಗಳೇ ತನಿಖೆಗೆ ಪ್ರಮುಖ ಆಧಾರಕಾಮಗಾರಿಯ ನೈಜ ಸ್ಥಿತಿಯನ್ನು ತಿಳಿಯಲು ಅಳತೆ ಪುಸ್ತಕ (Measurement Book), ತಾಂತ್ರಿಕ ಮಂಜೂರಾತಿ, ಆಡಳಿತಾತ್ಮಕ ಅನುಮೋದನೆ, ಟೆಂಡರ್ ಪ್ರಕ್ರಿಯೆ, ಗುತ್ತಿಗೆದಾರರ ವಿವರ, ಕಾರ್ಯಾದೇಶ, ಕಾಮಗಾರಿ ಪ್ರಗತಿ ವರದಿ, ಬಿಲ್‌ಗಳು, ಪಾವತಿ ವಹಿವಾಟುಗಳು ಮತ್ತು ಕಾಮಗಾರಿ ಪೂರ್ಣಗೊಂಡ ಪ್ರಮಾಣಪತ್ರಗಳನ್ನು ಪರಿಶೀಲಿಸಬೇಕು. ದಾಖಲೆಗಳಲ್ಲಿ ನಮೂದಿಸಿರುವ ಕಾಮಗಾರಿಯ ಪ್ರಮಾಣಕ್ಕೂ ಸ್ಥಳದಲ್ಲಿ ಕಂಡುಬರುವ ಕಾಮಗಾರಿಗೂ ಹೊಂದಾಣಿಕೆ ಇದೆಯೇ ಎಂಬುದನ್ನು ತಾಂತ್ರಿಕ ಅಧಿಕಾರಿಗಳ ತಂಡದಿಂದ ದೃಢಪಡಿಸಬೇಕು ಎಂದು ಆಗ್ರಹಿಸಿದ್ದಾರೆ.ಅಧಿಕಾರಿಗಳ ಪಾತ್ರದ ಬಗ್ಗೆಯೂ ತನಿಖೆಯಾಗಲಿಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮದ ಮುಖ್ಯ ಇಂಜಿನಿಯರ್, ಅಧೀಕ್ಷಕ ಅಭಿಯಂತರರು, ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಹಾಗೂ ಹಿರಿಯ ಮತ್ತು ಕಿರಿಯ ಇಂಜಿನಿಯರ್‌ಗಳು ಸೇರಿದಂತೆ ಕಾಮಗಾರಿಯ ಅನುಷ್ಠಾನ, ಅಳತೆ, ಗುಣಮಟ್ಟ ಪರಿಶೀಲನೆ, ಬಿಲ್ ದೃಢೀಕರಣ ಮತ್ತು ಹಣ ಪಾವತಿಯಲ್ಲಿ ಭಾಗವಹಿಸಿದ ಪ್ರತಿಯೊಬ್ಬ ಅಧಿಕಾರಿಯ ಪಾತ್ರವನ್ನು ಪ್ರತ್ಯೇಕವಾಗಿ ಪರಿಶೀಲಿಸಬೇಕು ಎಂದು ದೂರಿನಲ್ಲಿ ಒತ್ತಾಯಿಸಲಾಗಿದೆ.ಲೋಕಾಯುಕ್ತರಿಂದ ಸ್ಥಳ ಪರಿಶೀಲನೆಗೆ ಮನವಿಕೇವಲ ಕಚೇರಿಯ ದಾಖಲೆಗಳನ್ನು ಪರಿಶೀಲಿಸುವುದರಿಂದ ಸಾಲದು. ಸಂಬಂಧಪಟ್ಟ ಅಧಿಕಾರಿಗಳ ಸಮ್ಮುಖದಲ್ಲಿ ಸ್ಥಳ ಪರಿಶೀಲನೆ ನಡೆಸಿ, ಕಟ್ಟಡದ ಅಸ್ತಿತ್ವ, ನಿರ್ಮಾಣದ ಹಂತ, ಬಳಸಿರುವ ಸಾಮಗ್ರಿಗಳ ಗುಣಮಟ್ಟ ಹಾಗೂ ಕಾಮಗಾರಿಗೆ ಪಾವತಿಸಿರುವ ಮೊತ್ತದ ನೈಜತೆಯನ್ನು ಪರಿಶೀಲಿಸಬೇಕು. ಈ ಪ್ರಕ್ರಿಯೆಯಲ್ಲಿ ಲೋಕಾಯುಕ್ತರ ಗಮನಕ್ಕೂ ತಂದು ಸ್ವತಂತ್ರವಾಗಿ ಪರಿಶೀಲನೆ ನಡೆಸುವಂತೆ ಮನವಿ ಮಾಡಿದ್ದಾರೆ.ಕಾಮಗಾರಿ ನಡೆಸದೆ ಹಣ ಪಾವತಿಸಿರುವುದು, ಸುಳ್ಳು ಅಳತೆ ಪುಸ್ತಕ ಅಥವಾ ಪ್ರಮಾಣಪತ್ರಗಳನ್ನು ಸೃಷ್ಟಿಸಿರುವುದು, ಒಂದೇ ಕಾಮಗಾರಿಗೆ ಪುನರಾವರ್ತಿತವಾಗಿ ಹಣ ಪಾವತಿಸಿರುವುದು ಅಥವಾ ಸರ್ಕಾರಿ ಹಣ ದುರುಪಯೋಗವಾಗಿರುವುದು ತನಿಖೆಯಲ್ಲಿ ಸಾಬೀತಾದರೆ ಸಂಬಂಧಪಟ್ಟ ಅಧಿಕಾರಿಗಳು ಮತ್ತು ಗುತ್ತಿಗೆದಾರರ ವಿರುದ್ಧ ಅನ್ವಯಿಸುವ ಕ್ರಿಮಿನಲ್ ಕಾನೂನುಗಳ ಅಡಿಯಲ್ಲಿ ಪ್ರಕರಣ ದಾಖಲಿಸಬೇಕು. ತಪ್ಪಿತಸ್ಥರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಂಡು, ನಿಯಮಬಾಹಿರವಾಗಿ ಪಾವತಿಸಿರುವ ಸರ್ಕಾರಿ ಹಣವನ್ನು ಕಾನೂನು ಪ್ರಕ್ರಿಯೆಯಂತೆ ವಸೂಲಿ ಮಾಡಬೇಕು ಎಂದು ಆಗ್ರಹಿಸಿದ್ದಾರೆ.ಸಾರ್ವಜನಿಕರಿಗೆ ಗ್ರಂಥಾಲಯ ಸೌಲಭ್ಯ ಯಾವಾಗ?ಸಾರ್ವಜನಿಕ ಗ್ರಂಥಾಲಯವೆಂದರೆ ವಿದ್ಯಾರ್ಥಿಗಳು, ಸ್ಪರ್ಧಾತ್ಮಕ ಪರೀಕ್ಷೆಗಳ ಅಭ್ಯರ್ಥಿಗಳು, ಯುವಜನರು ಹಾಗೂ ಸಾರ್ವಜನಿಕರಿಗೆ ಜ್ಞಾನಾರ್ಜನೆಗೆ ನೆರವಾಗುವ ಪ್ರಮುಖ ಕೇಂದ್ರವಾಗಿದೆ. ಪಟ್ಟಣದ ಅಭಿವೃದ್ಧಿ ಮತ್ತು ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ಗ್ರಂಥಾಲಯ ಕಟ್ಟಡ ನಿರ್ಮಾಣಕ್ಕೆ ಮಂಜೂರಾದ ಅನುದಾನ ಸದುಪಯೋಗವಾಗುವುದು ಅತ್ಯಂತ ಅಗತ್ಯವಾಗಿದೆ. ಕೋಟ್ಯಂತರ ರೂಪಾಯಿ ಅಭಿವೃದ್ಧಿ ಯೋಜನೆಗಳ ನಡುವೆ ಸಾರ್ವಜನಿಕರ ಜ್ಞಾನವೃದ್ಧಿಗೆ ಮೀಸಲಾದ ಗ್ರಂಥಾಲಯದಂತಹ ಮೂಲಭೂತ ಸೌಲಭ್ಯಗಳ ಕಾಮಗಾರಿಗಳಲ್ಲಿಯೂ ಪಾರದರ್ಶಕತೆ ಇರಬೇಕು ಎಂಬುದು ಸಾರ್ವಜನಿಕರ ನಿರೀಕ್ಷೆಯಾಗಿದೆ.ಈ ಹಿನ್ನೆಲೆಯಲ್ಲಿ ರಾಜ್ಯಪಾಲರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಲೋಕೋಪಯೋಗಿ ಇಲಾಖೆ ಸಚಿವರು, ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿಗಳಿಗೆ ದೂರು ಸಲ್ಲಿಸಿರುವ ಅನಿಲಕುಮಾರ್ ಹೊನ್ನಟಗಿ ಅವರು, ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ಕಾಲಮಿತಿಯೊಳಗೆ ನಿಷ್ಪಕ್ಷಪಾತ ತನಿಖೆ ನಡೆಸಿ ವರದಿ ಪ್ರಕಟಿಸಬೇಕೆಂದು ಒತ್ತಾಯಿಸಿದ್ದಾರೆ.₹80 ಲಕ್ಷದ ಅನುದಾನದ ಲೆಕ್ಕಪತ್ರ ಸಾರ್ವಜನಿಕರ ಮುಂದೆ ಬರಲಿದೆಯೇ? ಸಾರ್ವಜನಿಕ ಗ್ರಂಥಾಲಯ ಕಟ್ಟಡದ ಕಾಮಗಾರಿಯ ನೈಜ ಸ್ಥಿತಿ ಏನು? ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಯಾವ ರೀತಿಯ ಕ್ರಮ ಕೈಗೊಳ್ಳಲಿದ್ದಾರೆ ಎಂಬುದನ್ನು ಕಾದುನೋಡಬೇಕಾಗಿದೆ.

ಕನ್ನಡ ರಾಜ್ಯೋತ್ಸವದ ಸಂಭ್ರಮ – ಸಹನಾ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ಅದ್ಧೂರಿ ಆಚರಣೆ

❑ ನೈಜ್ಯ ದೆಸೆ ನ್ಯೂಸ್



ಮುದಗಲ್:ಸ್ಥಳೀಯ ಸಹನಾ ಇಂಗ್ಲಿಷ್ ಮೀಡಿಯಂ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು.ಕಾರ್ಯಕ್ರಮವು ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವುದರೊಂದಿಗೆ ಪ್ರಾರಂಭವಾಯಿತು. ಶಾಲೆಯ ಮುಖ್ಯ ಶಿಕ್ಷಕರಾದ ಆದಿತ್ಯ ಅವರು ಮಾತನಾಡಿ, ಕನ್ನಡ ಭಾಷೆಯ ಇತಿಹಾಸ, ನಾಡಿನ ಸಂಸ್ಕೃತಿ, ಪರಂಪರೆ ಹಾಗೂ ಕನ್ನಡಿಗರ ಏಕತೆಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ತಿಳಿಸಿದರು.ವಿದ್ಯಾರ್ಥಿಗಳು ಕನ್ನಡ ನಾಡು–ನುಡಿ, ಸಂಸ್ಕೃತಿ ಮತ್ತು ಪರಂಪರೆಯನ್ನು ಬಿಂಬಿಸುವ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಿದರು. ಕನ್ನಡ ಗೀತೆಗಳು, ನೃತ್ಯಗಳು ಹಾಗೂ ಭಾಷಣಗಳ ಮೂಲಕ ಕನ್ನಡದ ಮೇಲಿನ ಅಭಿಮಾನವನ್ನು ವ್ಯಕ್ತಪಡಿಸಿದರು.ಕನ್ನಡ ಭಾಷೆಯ ಮಹತ್ವವನ್ನು ವಿವರಿಸಿ, ಪ್ರತಿಯೊಬ್ಬರೂ ತಮ್ಮ ದೈನಂದಿನ ಜೀವನದಲ್ಲಿ ಕನ್ನಡವನ್ನು ಪ್ರೀತಿಸಿ, ಗೌರವಿಸಿ, ಬೆಳೆಸಬೇಕು ಎಂದು ಶಿಕ್ಷಕಿಂಯರಾದ ಕವಿತಾ, ರಶ್ಮಿ ಕರೆ ನೀಡಿದರು.ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಾದ ,ವೀರಸಂಗಮ ,ಆಸಿಫ್ , ಮಾಹೆಕ್ , ಮಾನಸ, ಅನಮ್ , ಸಿದ್ರಾ ನಾಜ್, ಆಯೇಷಾ ರಿಫಾತ್, ಫರೀಸಾ ,ಉಮೇರಾ ,ನಿಜಾಹಿದ್ , ಮತ್ತು ಸನ ರಾಜ್ಯೋತ್ಸವ ದಿನಾಚರಣೆ ಬಗ್ಗೆ ಭಾಷಣ ಮಾಡಿದರು. ಕಾರ್ಯಕ್ರಮದ ಕೊನೆಯಲ್ಲಿ ವಿದ್ಯಾರ್ಥಿಗಳಿಗೆ ಸಿಹಿ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕಿಯರಾದ , ಪ್ರಿಯಾಂಕ,ಕವಿತಾ, ರಶ್ಮಿ , ಹೀನ ಬೇಗಂ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಶಾಲೆಯ ಶಿಕ್ಷಕಿಯಾದ ಸುಮಯ್ಯ ನಿರೂಪಿಸಿದರು. ಕಾರ್ಯಕ್ರಮವು ಯಶಸ್ವಿಯಾಗಿ ನೆರವೇರಿತು.

ಕನ್ನಡ ಭಾಷೆ ಸಂಸ್ಕೃತಿ ಪರಂಪರೆ ಹೆಮ್ಮೆಯ ಪ್ರತಿಕ: ಲಕ್ಷ್ಮಣ ಪಿಡಿಓ

❑ ನೈಜ್ಯ ದೆಸೆ ನ್ಯೂಸ್



ಹಾಲಾಪೂರ: ಕನ್ನಡ ರಾಜ್ಯೋತ್ಸವ ಆಚರಣೆ ನಿಮಿತ್ತವಾಗಿ ಹಾಲಾಪೂರದ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಧ್ವಜಾರೋಹಣ ಕಾರ್ಯಕ್ರಮವನ್ನು ಸ್ಥಳಿಯ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಲಕ್ಷ್ಮಣ ನೆರವೇರಿಸಿ ಮಾತನಾಡುತ್ತಾ ನಮ್ಮ ಕನ್ನಡ ನಾಡಿನ ಸಂಸ್ಕೃತಿ ಸಂಸ್ಕಾರ ಸಂಪ್ರದಾಯ ಪರಂಪರೆ ಹೆಮ್ಮೆಯ ಪ್ರತಿಕ, ನವಂಬರ್ ಒಂದು ಕನ್ನಡಿಗರಿಗೆ ನಾಡಿನ ಹಬ್ಬವಾಗಿ ಸಂಭ್ರಮದಿಂದ ಆಚರಿಸುತ್ತೇವೆ, ಈ ಒಂದು ಉತ್ಸವವು ಅನೇಕ ಮಹನೀಯರು, ಕವಿಗಳ ಹೋರಾಟ ಸತ್ಯಾಗ್ರಹ ಮಾಡುವ ಮೂಲಕ ಹರಿದು ಹಂಚಿ ಹೋಗಿದ್ದ ಕನ್ನಡ ಭಾಷೆ, ಒಂದುಗೂಡಿಸುವ ಕೆಲಸವನ್ನು ಕರ್ನಾಟಕ ಏಕೀಕರಣ ಚಳುವಳಿ ರೂವಾರಿಗಳಾದ ಆಲೂರು ವೆಂಕಟರಾಯರು ಹಾಗೂ ಇನ್ನೂ ಅನೇಕರ ನೇತೃತ್ವದಲ್ಲಿ ಕನ್ನಡ ಭಾಷೆ ಒಗ್ಗೂಡಿಸಿ ನಾಡು ನುಡಿ ರಕ್ಷಿಸುವ ಕೆಲಸ ನೆರವೇರದೆ, ಅದಕ್ಕೆ ನಾವು ಕನ್ನಡ ಭಾಷೆ ಸಂಸ್ಕೃತಿ ಪರಂಪರೆ ಉಳಿಸುವ ಬೆಳೆಸುವ ಗುರುತರ ಜವಾಬ್ದಾರಿ ನಮ್ಮೆಲ್ಲರ ಮೇಲೆ ಇದೆ ಎಂದು ಲಕ್ಷ್ಮಣ ಪಿ ಡಿ ಓ ಹೇಳಿದರು. ಈ ಸಂದರ್ಭದಲ್ಲಿ ಗ್ರಾಮದ ಗುರುಹಿರಿಯರು, ರಕ್ಷಣಾ ವೇದಿಕೆ ಪದಾಧಿಕಾರಿಗಳು, ಶಿಕ್ಷಕರು, ಗ್ರಾಮ ಪಂಚಾಯತಿ ಸಿಬ್ಬಂದಿ ವರ್ಗದವರು, ಯುವಕರು ಇನ್ನಿತರರು ಇದ್ದರು.

71 ನೇಯ ಕನ್ನಡ ರಾಜ್ಯೋತ್ಸವದ ಭವ್ಯ ಮೆರವಣಿಗೆ

❑ ನೈಜ್ಯ ದೆಸೆ ನ್ಯೂಸ್



ರಾಯಚೂರು,:71 ನೇಯ ಕರ್ನಾಟಕ ರಾಜ್ಯೋತ್ಸವದ ಭವ್ಯ ಮೆರವಣಿಗೆಯಲ್ಲಿ ಭಾಗವಹಿಸಿದ್ದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಸಿದ್ದಪಡಿಸಿದ ಸ್ಥಬ್ದಚಿತ್ರವನ್ನು ಡಾ ಅಜಯ್ ಧರ್ಮಸಿಂಗ್, ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಚಾಲನೆ ನೀಡಿದರು ಸ್ಥಬ್ದಚಿತ್ರ ಒಳಗೊಂಡ ವಿಷಯದ ಕುರಿತು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ನಂದಿತಾ ಎಮ್ ಎನ್ ರವರಿಂದ ಮಾಹಿತಿ ಪಡೆದು ಮೆಚ್ಚುಗೆ ವ್ಯಕ್ತಪಡಿಸಿದರು.ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅರುಣಾಂಶು ಗಿರಿ, ಆಯುಕ್ತರು ಮಹಾನಗರ ಪಾಲಿಕೆ ಆಯುಕ್ತರಾದ ಜುಬೀನ್ ಮೋಹಪಾತ್ರ, ಅಪರ ಜಿಲ್ಲಾಧಿಕಾರಿ ಸೋಮಲಿಂಗ ಗೋಪಾಲ ಗೆಣ್ಣೂರ ಸಹಾಯಕ ಅಯುಕ್ತರಾದ ಹಂಪಣ್ಣ ಸಜ್ಜನ, ತಹಶಿಲ್ದಾರ ಸುರೇಶ ವರ್ಮಾ, ಸೇರಿದಂತೆ ಗಣ್ಯರು ಆರೋಗ್ಯ ಇಲಾಖೆಯ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಗಳು ಉಪಸ್ಥಿತರಿದ್ದರು.ಸ್ಥಬ್ದಚಿತ್ರ ಒಳಗೊಂಡ ವಿಷಯಗಳು:*ಕಿಶೋರಿ ಕೇಂದ್ರ*ಜಿಲ್ಲಾ ಪಂಚಾಯತನ ಮಹತ್ವ ಪೂರ್ಣ ಯೋಜನೆಯಾಗಿರುವ ಕಿಶೋರಿ ಕೇಂದ್ರದ ಮುಖ್ಯ ಉದ್ದೇಶ ಹದಿಹರೆಯದ ಹೆಣ್ಣು ಮಕ್ಕಳ (11 ರಿಂದ 18 ವರ್ಷ) ಸರ್ವತೋಮುಖ ಅಭಿವೃದ್ಧಿ ಮತ್ತು ಸಬಲೀಕರಣವಾಗಿದೆ. ಗ್ರಾಮೀಣ ಮತ್ತು ನಗರ ಪ್ರದೇಶಗಳ ಹದಿಹರೆಯದ ಬಾಲಕಿಯರಲ್ಲಿ ಆರೋಗ್ಯ, ಶಿಕ್ಷಣ ಮತ್ತು ಜೀವನ ಕೌಶಲ್ಯಗಳನ್ನು ಬೆಳೆಸಲು ಪ್ರಮುಖ ಪಾತ್ರ ವಹಿಸುತ್ತವೆ. ಪ್ರಸ್ತುತ ಬಾಲಕರಿಗೂ ಸೇವೆಗಳನ್ನು ಒದಗಿಸಲಾಗುತ್ತಿದ್ದು, ಜಿಲ್ಲೆಯಲ್ಲಿ , ರಾಯಚೂರು, ದೇವದುರ್ಗ, ಜಾಲಹಳ್ಳಿ, ಅರಕೇರಾ, ಸಿರವಾರ, ಗಬ್ಬೂರುಗಳಲ್ಲಿ ಆರಂಭವಾಗಿದ್ದು, ಉಳಿದ ತಾಲೂಕುಗಳಲ್ಲಿ ಆರಂಭಿಸಲಾಗುತ್ತಿದ್ದು,ಬಾಲ್ಯ ವಿವಾಹ ತಡೆಗಟ್ಟುವಿಕೆ, ದೈಹಿಕ ಮತ್ತು ಮಾನಸಿಕ ತೊಂದರೆಗಳ ಬಗ್ಗೆ ಜಾಗೃತಿ, ಆರೋಗ್ಯ ಮತ್ತು ಪೌಷ್ಟಿಕಾಂಶ ವೃದ್ಧಿಗೊಳಿಸಲು ಜಾಗೃತಿ, ಮುಟ್ಟಿನ ನೈರ್ಮಲ್ಯದ ಜಾಗೃತಿ, ಸ್ಯಾನಿಟರಿ ಪ್ಯಾಡ್‌ಗಳ ಬಳಕೆ, ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಮೂಲಕ ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಶಿಕ್ಷಣದ ವಾಹಿನಿಗೆ ತರುವುದು, ಜೀವನ ಕೌಶಲ್ಯ ಮತ್ತು ಆತ್ಮರಕ್ಷಣೆಯ ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ, ಇಂಟರ್ನೆಟ್ ಸುರಕ್ಷತೆ ಹಾಗೂ ಯೋಗ, ಕರಾಟೆಯಂತಹ ಆತ್ಮರಕ್ಷಣಾ ಕಲೆಗಳನ್ನು ಕಲಿಸಿ ಅವರಲ್ಲಿ ಆತ್ಮವಿಶ್ವಾಸ ತುಂಬುವುದು. ಇದರೊಂದಿಗೆ, ಮನೆ ಬಾಗಿಲಿಗೆ ಆರೋಗ್ಯ ಸೇವೆ ನೀಡುವ ಗೃಹ ಆರೋಗ್ಯ ಯೋಜನೆ, ನಗರದ ಪ್ರದೇಶದ ಆರ್ಥಿಕ ದುರ್ಬಲ ವರ್ಗದವರಿಗೆ ಗುಣಮಟ್ಟದ ಆರೋಗ್ಯ ಸೇವೆ ನೀಡುವ ನಮ್ಮ ಕ್ಲಿನಿಕ್, ಹುಟ್ಟಿನಿಂದ 18 ವರ್ಷದೊಳಗಿನ ಮಕ್ಕಳ ಬೆಳವಣಿಗೆಯ ಕುಂಟಿತಕ್ಕೆ ಕಾರಣವಾಗುವ ಅಂಶಗಳನ್ನು ಪತ್ತೆ ಹಚ್ಚಿ ಚಿಕಿತ್ಸೆ ಒದಗಿಸುವ ಆರ್‌ಬಿಎಸ್‌ಕೆ ಹಾಗೂ ಸೋಂಕಿತ ಈಡಿಸ್ ಇಜಿಪ್ಟೈ ಸೊಳ್ಳೆ ಕಚ್ಚುವಿಕೆಯಿಂದ ಹರುಡುವ ಡೆಂಗ್ಯು ಕುರಿತು ಜಾಗೃತಿಯ ಮಾದರಿಗಳ ಮೂಲಕ ಜಾಗೃತಿ ನೀಡುವ ಸ್ಥಬ್ಧಚಿತ್ರ ಎಲ್ಲರನ್ನು ಆಕರ್ಷಿಸಿತು.ಆರೋಗ್ಯ ಇಲಾಖೆಯ ಮಾಹಿತಿ ಶಿಕ್ಷಣ ಸಂವಹನ ವಿಭಾಗದಿಂದ ಸಿದ್ದಪಡಿಸಿದ ಸ್ಥಬ್ಧಚಿತ್ರವನ್ನು ಕನ್ನಡ ಸಂಘದ ಭವನದಿಂದ ಮಹಾತ್ಮಾ ಗಾಂಧಿ ಕ್ರೀಡಾಂಗಣದ ವರೆಗೆ ಜನತೆಯು ಕುತೂಹಲದಿಂದ ವಿಕ್ಷಿಸಿದರಲ್ಲದೆ ಅಲ್ಲಲ್ಲಿ ಮಾಹಿತಿ ಪಡೆದುಕೊಂಡರು.

ದೇವದುರ್ಗದಲ್ಲಿ 71ನೇ ಕರ್ನಾಟಕ ರಾಜ್ಯೋತ್ಸವ ಆಚರಣೆ: ಭುವನೇಶ್ವರಿ ಭಾವಚಿತ್ರದ ಮೆರವಣಿಗೆಗೆ ಶಾಸಕಿ ಕರೆಮ್ಮ ಜಿ. ನಾಯಕ ಚಾಲನೆ

❑ ನೈಜ್ಯ ದೆಸೆ ನ್ಯೂಸ್



ದೇವದುರ್ಗ, ನ. 1: ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ಹಾಗೂ ದೇವದುರ್ಗ ಪುರಸಭೆಯ ಸಂಯುಕ್ತ ಆಶ್ರಯದಲ್ಲಿ 71ನೇ ಕರ್ನಾಟಕ ರಾಜ್ಯೋತ್ಸವವನ್ನು ಪಟ್ಟಣದ ಸಾರ್ವಜನಿಕ ಕ್ಲಬ್ ಮೈದಾನದಲ್ಲಿ ಆಚರಿಸಲಾಯಿತು.ಕಾರ್ಯಕ್ರಮದ ಅಂಗವಾಗಿ ತಾಲೂಕು ಪಂಚಾಯಿತಿ ಕಾರ್ಯಾಲಯದ ಆವರಣದಲ್ಲಿ ತಹಸೀಲ್ದಾರ್ ನಾಗಮ್ಮ ಕಟ್ಟಿಮನಿ ಅವರ ನೇತೃತ್ವದಲ್ಲಿ ನಡೆದ ಭುವನೇಶ್ವರಿ ಭಾವ ಚಿತ್ರ ಮೆರವಣಿಗೆ ಯನ್ನು ಶಾಸಕಿ ಕರೆಮ್ಮ ಜಿ. ನಾಯಕ ಅವರು ತಾಯಿ ಭುವನೇಶ್ವರಿಯ ಭಾವಚಿತ್ರವಿರುವ ಮೆರವಣಿಗೆ ರಥಕ್ಕೆ ಚಾಲನೆ ನೀಡಿದರು. ಮೆರವಣಿಗೆಯು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಸಾರ್ವಜನಿಕ ಕ್ಲಬ್ ಮೈದಾನಕ್ಕೆ ತಲುಪಿತು. ನಂತರ ವೇದಿಕೆಯಲ್ಲಿ ಗಣ್ಯರನ್ನು ಸ್ವಾಗತಿಸಲಾಯಿತುಸರಕಾರಿ ಬಾಲಕಿಂಯರ ಪ್ರೌಢಶಾಲೆಯ ವಿದ್ಯಾರ್ಥಿನಿಯರು ಪ್ರಾರ್ಥನಾ ಗೀತೆ ಹಾಗೂ ರಾಷ್ಟ್ರಗೀತೆ ಹಾಡಿದರು. ತಾಲೂಕು ಸಮಾಜ ಕಲ್ಯಾಣ ಅಧಿಕಾರಿ ರಾಜಕುಮಾರ್ ಅತಿಥಿಗಳನ್ನು ಸ್ವಾಗತಿಸಿದರು. ಗಣ್ಯರು ಜ್ಯೋತಿ ಬೆಳಗಿಸುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು. ಬಳಿಕ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಲಾಯಿತು. ಕನ್ನಡ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಶಿವರಾಜ್ ಪ್ರಾಸ್ತಾವಿಕವಾಗಿ ಮಾತನಾಡಿ, ಕರ್ನಾಟಕ ಏಕೀಕರಣದ ಸಂದರ್ಭದಲ್ಲಿ ಕನ್ನಡ ಭಾಷೆಯ ಉಳಿವು ಮತ್ತು ಬೆಳವಣಿಗೆಗಾಗಿ ಹೋರಾಟಗಾರರು, ಸಾಹಿತಿಗಳು ಹಾಗೂ ಕವಿಗಳು ಶ್ರಮಿಸಿದ್ದಾರೆ. ಅವರ ಪರಿಶ್ರಮದ ಫಲವಾಗಿ ಕನ್ನಡ ನಾಡು ರೂಪುಗೊಂಡಿದೆ. ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ ಎಂದರು.ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಲಕ್ಷ್ಮಣ ಜ್ಯೋತಿ ಮಾತನಾಡಿ, ತಾಲೂಕು ಆಡಳಿತವು ರಾಜ್ಯೋತ್ಸವವನ್ನು ಕೇವಲ ಔಪಚಾರಿಕವಾಗಿ ಆಚರಿಸುತ್ತಿದೆ. ಸಮರ್ಪಕವಾಗಿ ಹಾಗೂ ಅರ್ಥಪೂರ್ಣವಾಗಿ ಕಾರ್ಯಕ್ರಮ ಆಯೋಜಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.ವಿಶೇಷ ಉಪನ್ಯಾಸ ನೀಡಿದ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಪ್ರಾಂಶುಪಾಲ ರಂಗಪ್ಪ ನಾಯಕ ಮಾತನಾಡಿ, ಕದಂಬರ ಕಾಲದ ಶಾಸನಗಳು ಕನ್ನಡ ಭಾಷೆಯ ಪ್ರಾಚೀನತೆಯನ್ನು ಸಾರುತ್ತವೆ. ಶರಣರು, ದಾಸರು ಹಾಗೂ ಸೂಫಿ ಸಂತರು ಕನ್ನಡ ಭಾಷೆಯ ಶ್ರೀಮಂತಿಕೆಗೆ ಅಪಾರ ಕೊಡುಗೆ ನೀಡಿದ್ದಾರೆ. ಪ್ರತಿಯೊಬ್ಬರೂ ಕನ್ನಡದ ಬಗ್ಗೆ ಅಭಿಮಾನ ಹೊಂದುವುದರ ಜತೆಗೆ ದೈನಂದಿನ ವ್ಯವಹಾರಗಳಲ್ಲಿ ಕನ್ನಡ ಭಾಷೆಯನ್ನು ಹೆಚ್ಚಾಗಿ ಬಳಸಬೇಕು. ಕನ್ನಡವನ್ನು ಉಳಿಸಿ ಬೆಳೆಸುವ ಕಾರ್ಯದಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.ನಂತರ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.ಕರವೇ ಮುಖಂಡರಿಂದ ಪ್ರತಿಭಟನೆ:ರಾಜ್ಯೋತ್ಸವ ಕಾರ್ಯಕ್ರಮ ಆರಂಭಕ್ಕೂ ಮುನ್ನವೇ ಕಾರ್ಯಕ್ರಮದ ಸರಳ ಆಯೋಜನೆ ಹಾಗೂ ಕನ್ನಡ ಬಾವುಟಗಳನ್ನು ಸಮರ್ಪಕವಾಗಿ ಕಟ್ಟದಿರುವುದನ್ನು ಖಂಡಿಸಿ ಕರ್ನಾಟಕ ರಕ್ಷಣಾ ವೇದಿಕೆಯ ಮುಖಂಡರು ಪ್ರತಿಭಟನೆ ನಡೆಸಿದರು.ರಾಜ್ಯೋತ್ಸವದಂತಹ ನಾಡಹಬ್ಬವನ್ನು ಕನ್ನಡದ ಹಬ್ಬದ ಸಂಭ್ರಮಕ್ಕೆ ತಕ್ಕಂತೆ ಅಚ್ಚುಕಟ್ಟಾಗಿ ಆಯೋಜಿಸಬೇಕಾಗಿತ್ತು. ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ಕಾರ್ಯಕ್ರಮ ಅಸ್ತವ್ಯಸ್ತವಾಗಿ ನಡೆದಿದೆ ಎಂದು ಕರವೇ ಮುಖಂಡರು ಆಕ್ರೋಶ ವ್ಯಕ್ತಪಡಿಸಿದರು.ಮುಂದಿನ ದಿನಗಳಲ್ಲಿ ಇಂತಹ ಲೋಪಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಬೇಕು. ಕನ್ನಡ ರಾಜ್ಯೋತ್ಸವವನ್ನು ಕನ್ನಡದ ಸಂಭ್ರಮ, ಸಡಗರದೊಂದಿಗೆ ಅದ್ದೂರಿಯಾಗಿ ಆಚರಿಸಬೇಕು ಎಂದು ಅಧಿಕಾರಿಗಳನ್ನು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಅಧಿಕಾರಿಗಳು ಹಾಗೂ ಕರವೇ ಮುಖಂಡರ ನಡುವೆ ಮಾತಿನ ಚಕಮಕಿ ನಡೆದು ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು.ಈ ವೇಳೆ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಜೇಂದ್ರ ಕುಮಾರ್ ಅವರು ಕರವೇ ಮುಖಂಡರನ್ನು ಸಮಾಧಾನಪಡಿಸಿ, ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಅಗತ್ಯ ಕ್ರಮ ವಹಿಸುವುದಾಗಿ ಭರವಸೆ ನೀಡಿದರು.ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಗಣ್ಯರು:ಕಾರ್ಯಕ್ರಮದ ಅಧ್ಯಕ್ಷತೆಯನ್ನು ಉಪತಹಸೀಲ್ದಾರ್ ಪರಶುರಾಮ್ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಲಕ್ಷ್ಮಣ ಜ್ಯೋತಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ರಾಜೇಂದ್ರ ಕುಮಾರ್, ಸಮಾಜ ಕಲ್ಯಾಣ ಅಧಿಕಾರಿ ರಾಜಕುಮಾರ್, ಹಿರಿಯ ಸ್ವಾತಂತ್ರ್ಯ ಹೋರಾಟಗಾರ್ತಿ ಆದಿ ಕಮಲಮ್ಮ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಹನುಮಂತರಾಯ ಶಾಖೆ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಶಿವರಾಜ್, ಸಿಡಿಪಿಓ ಮಹೇಶ್ ನಾಯಕ, ಅರಣ್ಯ ಅಧಿಕಾರಿ ಅಲಿಮುದ್ದಿನ್, ಪುರಸಭೆ ಅಧಿಕಾರಿ ಗಂಗಾಧರ್, ಲೋಕೋಪಯೋಗಿ ಇಲಾಖೆಯ ಎಇಇ ನಿವಾಸ ನಾಯಕ, ಬಿಸಿಎಂ ಅಧಿಕಾರಿ ಬಾಬು, ಎಇಇ ಭೀಮಾಶಂಕರ ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿ ರಾಧಾದೇವಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು. ಕರವೇ ಅಧ್ಯಕ್ಷ ನಂದಪ್ಪ ಪಿ. ಮಡ್ಡಿ, ಬಸವರಾಜ್ ಗೋಪಾಳಪುರ, ಸುರೇಶ್ ಪಾಟೀಲ್, ಟಿ. ಜಯರಾಮ್, ಜಾಲಹಳ್ಳಿ ಹೋಬಳಿ ಅಧ್ಯಕ್ಷ ತಮ್ಮಣ್ಣ ಹೆರುಂಡಿ ಸೇರಿದಂತೆ ಕರವೇ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.ವರದಿ: ಖಾಜಾ ಹುಸೇನ್ ಬಾಬಾ, ಪತ್ರಕರ್ತರು, ಜಾಲಹಳ್ಳಿ.

ನೇಮಕಾತಿ ಪ್ರಕಟಣೆ

ಶಿವಮೊಗ್ಗ ಮಹಾನಗರ ಪಾಲಿಕೆ ನೇಮಕಾತಿ 2026 – 45 ಪೌರಕಾರ್ಮಿಕ ಹುದ್ದೆಗಳಿಗೆ ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ. ಶಿವಮೊಗ್ಗ ಮಹಾನಗರ ಪಾಲಿಕೆ ನೇಮಕಾತಿ 2026: 45 ಪೌರಕಾರ್ಮಿಕ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಶಿವಮೊಗ್ಗ ಮಹಾನಗರ ಪಾಲಿಕೆಯು ಅಕ್ಟೋಬರ್ 2026ರ ಅಧಿಕೃತ ಅಧಿಸೂಚನೆಯ ಮೂಲಕ, ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಪೌರಕಾರ್ಮಿಕ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಕೋರಿದೆ. ಕರ್ನಾಟಕ ಸರ್ಕಾರದ ಅಧೀನದಲ್ಲಿರುವ ಶಿವಮೊಗ್ಗ ಮಹಾನಗರ ಪಾಲಿಕೆಯಲ್ಲಿ ಉದ್ಯೋಗವನ್ನು ಹುಡುಕುತ್ತಿರುವವರು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು 09–ನವೆಂಬರ್–2026 ರಂದು ಅಥವಾ ಅದಕ್ಕೂ ಮೊದಲು ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಸಂಸ್ಥೆಯ ಹೆಸರು: ಶಿವಮೊಗ್ಗ ಮಹಾನಗರ ಪಾಲಿಕೆ ಹುದ್ದೆಗಳ ಸಂಖ್ಯೆ: 45 ಉದ್ಯೋಗ ಸ್ಥಳ: ಶಿವಮೊಗ್ಗ – ಕರ್ನಾಟಕ ಹುದ್ದೆಯ ಹೆಸರು: ಪೌರಕಾರ್ಮಿಕ ವೇತನ: ತಿಂಗಳಿಗೆ ರೂ. 27,000 – 46,675/– ಆಫ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 09–ನವೆಂಬರ್–2026. ಅಧಿಕೃತ ವೆಬ್‌ಸೈಟ್: shivamoggacitycorp.org.

ಶ್ರೀ ಜೆ.ಜೆ. ಶಿಕ್ಷಣ ಸಂಸ್ಥೆಯಲ್ಲಿ 71ನೇ ಕನ್ನಡ ರಾಜ್ಯೋತ್ಸವ ಆಚರಣೆ

❏ ನೈಜ್ಯ ದೆಸೆ ನ್ಯೂಸ್



ಜಾಲಹಳ್ಳಿ, ನ. 1:** ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿಯ ಶ್ರೀ ಜೆ.ಜೆ. ಶಿಕ್ಷಣ ಸಂಸ್ಥೆಯಲ್ಲಿ 71ನೇ ಕರ್ನಾಟಕ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು.ಕಾರ್ಯಕ್ರಮದಲ್ಲಿ ತಾಯಿ ಭುವನೇಶ್ವರಿ ಭಾವ ಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಶ್ಚಿಮ ವಲಯದ ಸಿಆರ್‌ಪಿ ಸೋಮಶೇಖರ್ ದೊರೆ ವಹಿಸಿದ್ದರು. ಶ್ರೀ ಗುರುಸ್ವಾಮಿ ಅವರು ಧ್ವಜಾರೋಹಣ ನೆರವೇ–ರಿಸಿದರು.ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪ್ರೌಢಶಾಲೆಯ ಮುಖ್ಯಗುರುಗಳಾದ ಮಾರುತಿರಾವ್ ಕುಲಕರ್ಣಿ, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಮೌನೇಶ ಬಡಿಗೇರ್ ಹಾಗೂ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ದಂಡನಗೌಡ ಪಾಟೀಲ್ ಭಾಗವಹಿಸಿದ್ದರು.ಇದೇ ಸಂದರ್ಭದಲ್ಲಿ ಬಸಯ್ಯ ಹಿರೇಮಠ, ಶ್ರೀಕರ ಹಿರೇಮಠ, ಗುಡ್ಡಪ್ಪ ಬಿ., ತವನಪ್ಪ ಮುತ್ತಿನ, ಶಿವಕುಮಾರ್ ರಾಥೋಡ್, ವಿಜಯಲಕ್ಷ್ಮಿ, ಶಾಂತ ಮೇಡಂ, ಪ್ರಥಮ ದರ್ಜೆ ಸಹಾಯಕರಾದ ದ್ರಾಕ್ಷಾಯಿಣಿ, ವೀರೇಶ್ ಗೌಳಿ, ಚಂದ್ರಶೇಖರ್ ಕುದುರೆಕಾರ್ ಹಾಗೂ ಅಡಿವಯ್ಯ ಸ್ವಾಮಿ ಸೇ–ರಿದಂತೆ ಶಿಕ್ಷಣ ಸಂಸ್ಥೆಯ ಸಿಬ್ಬಂದಿ ಮತ್ತು ಶಿಕ್ಷಕರು ಉಪಸ್ಥಿತ–ರಿದ್ದರು.ಕಾರ್ಯಕ್ರಮದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಅಧ್ಯಕ್ಷರಾದ ನಂದಪ್ಪ ಪಿ. ಮಡ್ಡಿ, ಜಾಲಹಳ್ಳಿ ಹೋಬಳಿ ಅಧ್ಯಕ್ಷರಾದ ತಮ್ಮಣ್ಣ ಹೆರುಂಡಿ ಹಾಗೂ ಪತ್ರಕರ್ತರಾದ ಖಾಜಾ ಹುಸೇನ್ ಬಾಬಾ ಭಾಗವಹಿಸಿದ್ದರು.ಕನ್ನಡ ನಾಡು, ನುಡಿ, ಭಾಷೆ ಮತ್ತು ಸಂಸ್ಕೃತಿಯ ಅಭಿಮಾನವನ್ನು ಸಾರುವ ಮೂಲಕ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ವರದಿ: ಖಾಜಾ ಹುಸೇನ್ ಬಾಬಾ, ಪತ್ರಕರ್ತರು, ಜಾಲಹಳ್ಳಿ.

ಜಾಲಹಳ್ಳಿ ನಾಡಕಚೇರಿಯಲ್ಲಿ 71ನೇ ಕನ್ನಡ ರಾಜ್ಯೋತ್ಸವ ಆಚರಣೆ

❏ ನೈಜ್ಯ ದೆಸೆ ನ್ಯೂಸ್



ಜಾಲಹಳ್ಳಿ,ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದ ನಾಡಕಚೇರಿಯಲ್ಲಿ 71ನೇ ಕನ್ನಡ ರಾಜ್ಯೋತ್ಸವವನ್ನು ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮದ ಆರಂಭದಲ್ಲಿ ತಾಯಿ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಗೌರವ ಅರ್ಪಿಸಲಾಯಿತು. ಬಳಿಕ ಉಪ ತಹಸೀಲ್ದಾರ್ ಗೋವಿಂದಪ್ಪ ನಾಯಕ ಅವರು ಧ್ವಜಾರೋಹಣ ನೆರವೇರಿಸಿದರು.ಈ ಸಂದರ್ಭದಲ್ಲಿ ಶಾಲಾ ಮಕ್ಕಳು ರಾಷ್ಟ್ರಗೀತೆ ಹಾಗೂ ನಾಡಗೀತೆಯನ್ನು ಹಾಡಿ ಕನ್ನಡ ನಾಡು, ನುಡಿ ಮತ್ತು ಸಂಸ್ಕೃತಿಯ ಗೌರವವನ್ನು ಸಾರಿದರು.ಕಾರ್ಯಕ್ರಮದಲ್ಲಿ ಉಪ ತಹಸೀಲ್ದಾರ್ ಗೋವಿಂದಪ್ಪ ನಾಯಕ, ಗ್ರಾಮ ಆಡಳಿತ ಅಧಿಕಾರಿ ಹನುಮಂತರಾಯ, ಮುತ್ತು ಸೇರಿದಂತೆ ನಾಡಕಚೇರಿಯ ಸಿಬ್ಬಂದಿ ಉಪಸ್ಥಿತ–ರಿದ್ದರು.ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ

ಕಂಪ್ಲಿಯಲ್ಲಿ ಕನ್ನಡ ರಾಜ್ಯೋತ್ಸವದ ಭವ್ಯ ಮೆರವಣಿಗೆ

❏ ನೈಜ್ಯ ದೆಸೆ ನ್ಯೂಸ್



ಕಂಪ್ಲಿ: ತಾಲೂಕು ಆಡಳಿತದ ವತಿಯಿಂದ ಪಟ್ಟಣದಲ್ಲಿ ನವೆಂಬರ್ 1ರಂದು ಕನ್ನಡ ರಾಜ್ಯೋತ್ಸವವನ್ನು ಅತ್ಯಂತ ಸಂಭ್ರಮ ಸಡಗರದಿಂದ ಆಚರಿಸಲಾಯಿತು.ರಾಜ್ಯೋತ್ಸವದ ಅಂಗವಾಗಿ ಪಟ್ಟಣದ ಸೋಮಪ್ಪನ ದೇವಸ್ಥಾನದ ಆವರಣದಲ್ಲಿ ತಾಯಿ ಭುವನೇಶ್ವರಿ ದೇವಿಯ ಪ್ರತಿಮೆಗೆ ತಹಶೀಲ್ದಾರ್ ಜೂಗಲ ಮಂಜುನಾಯಕ್ ಅವರು ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಭವ್ಯ ಮೆರವಣಿಗೆಗೆ ಅಧಿಕೃತ ಚಾಲನೆ ನೀಡಿದರು.ನಂತರ ನಗರದ ಪ್ರಮುಖ ಬೀದಿಗಳಲ್ಲಿ ಕನ್ನಡದ ಹಳದಿ–ಕೆಂಪು ಬಾವುಟಗಳೊಂದಿಗೆ ಗಣ್ಯರು ಹಾಗೂ ಸಾರ್ವಜನಿಕರ ಸಮ್ಮುಖದಲ್ಲಿ ಮೆರವಣಿಗೆ ಸಾಗಿ–ತು. ಈ ಸಂಭ್ರಮದಲ್ಲಿ ಪುರಸಭೆಯ ಪ್ರಭಾರಿ ಮುಖ್ಯಾಧಿಕಾರಿ ಬಿ. ಮಲ್ಲಿಕಾರ್ಜುನ, ಕಂಪ್ಲಿಯ ಪ್ರಮುಖ ಮುಖಂಡರಾದ ಕ.ಮ ಹೇಮಯ್ಯಸ್ವಾಮಿ ಸೇರಿದಂತೆಮೆರವಣಿಗೆಯಲ್ಲಿ ವಿವಿಧ ಶಾಲಾ–ಕಾಲೇಜುಗಳ ವಿದ್ಯಾರ್ಥಿಗಳು, ತಾಲೂಕು ಮಟ್ಟದ ಅಧಿಕಾ–ರಿಗಳು ಹಾಗೂ ಕನ್ನಡಪರ ಸಂಘಟನೆಗಳ ಪದಾಧಿಕಾರಿಗಳು ಭಾಗವಹಿಸಿದರು. ಕನ್ನಡ ನಾಡು, ನುಡಿ, ಭಾಷೆಯ ಮಹತ್ವ ಸಾರುವ ಘೋಷಣೆಗಳೊಂದಿಗೆ ಕಂಪ್ಲಿ ಪಟ್ಟಣದಾದ್ಯಂತ ಕನ್ನಡದ ಹಬ್ಬದ ವಾತಾವರಣ ಮನೆಮಾಡಿತ್ತು.ವರದಿ : ಜಿಲಾನಸಾಬ್ ಬಡಿಗೇರ್

ಜಾಲಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ 71ನೇ ಕರ್ನಾಟಕ ರಾಜ್ಯೋತ್ಸವ ಆಚರಣೆ

❏ ನೈಜ್ಯ ದೆಸೆ ನ್ಯೂಸ್



ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮ ಪಂಚಾಯಿತಿ ವತಿಯಿಂದ 71ನೇ ಕರ್ನಾಟಕ ರಾಜ್ಯೋತ್ಸವವನ್ನು ನ. 1ರಂದು ಸರಳವಾಗಿ ಆಚರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹನುಮಂತಿ ಶಿವಬಸಪ್ಪ ರಾಮ ಪಾಳಿ ಅವರು ಧ್ವಜಾರೋಹಣ ನೆರವೇ–ರಿಸಿದರು. ಶಾಲಾ ಮಕ್ಕಳು ರಾಷ್ಟ್ರಗೀತೆ ಹಾಗೂ ನಾಡಗೀತೆಯನ್ನು ಹಾಡಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಗ್ರಾಮ ಪಂಚಾಯಿತಿ ಸದಸ್ಯ ಅಬ್ದುಲ್ ರಹಮಾನ್ ಖುರೇಶಿ ಅವರು, 1973ರ ನವೆಂಬರ್ 1ರಂದು ಅಂದಿನ ಮುಖ್ಯಮಂತ್ರಿ ದೇವರಾಜ ಅರಸು ಅವರ ನೇತೃತ್ವದಲ್ಲಿ ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಲಾಯಿತು. ಕರ್ನಾಟಕದ ಇತಿಹಾಸ, ಸಂಸ್ಕೃತಿ ಹಾಗೂ ಪರಂಪರೆಯ ಬೆಳವಣಿಗೆಯಲ್ಲಿ ಹಲವು ಮಹನೀಯರ ಕೊಡುಗೆ ಮಹತ್ವದ್ದಾಗಿದೆ. ಕರ್ನಾಟಕ ಏಕೀಕರಣಕ್ಕಾಗಿ ಆಲೂರು ವೆಂಕಟರಾಯರು ಸೇರಿದಂತೆ ಅನೇಕ ಹೋರಾಟಗಾರರು ಶ್ರಮಿಸಿದ್ದಾರೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಮಾತನಾಡಿದ ಪತ್ರಕರ್ತ ಖಾಜಾ ಹುಸೇನ್ ಬಾಬಾ ಅವರು, ದೇಶಕ್ಕೆ ಕರ್ನಾಟಕದ ಕೊಡುಗೆ ಅಪಾರವಾಗಿದೆ. ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು ಸೇರಿದಂತೆ ಅನೇಕ ಮಹಾನ್ ಸಾಹಿತಿಗಳು, ಕವಿಗಳು ಹಾಗೂ ಕಲಾವಿದರನ್ನು ನಾಡು ದೇಶಕ್ಕೆ ನೀಡಿದೆ. ದಾದಾಸಾಹೇಬ್ ಫಾಲ್ಕೆ ಪ್ರಶಸ್ತಿ ಸೇರಿದಂತೆ ಹಲವು ರಾಷ್ಟ್ರೀಯ ಗೌರವಗಳನ್ನು ಪಡೆದ ಕನ್ನಡಿಗರು ನಮ್ಮ ನಾಡಿನ ಹೆಮ್ಮೆ. ಇಂತಹ ಶ್ರೀಮಂತ ಪರಂಪರೆಯನ್ನು ಹೊಂದಿರುವ ಕರ್ನಾಟಕದ ಕನ್ನಡ ಭಾಷೆ, ಸಂಸ್ಕೃತಿ ಮತ್ತು ನೆಲದ ಗೌರವವನ್ನು ಪ್ರತಿಯೊಬ್ಬರೂ ಉಳಿಸಿ ಬೆಳೆಸಬೇಕು ಎಂದು ಹೇಳಿದರು.ಕರವೇ ತಾಲೂಕು ಅಧ್ಯಕ್ಷ ಹಾಗೂ ಮುಖಂಡ ನಂದಪ್ಪ ಪಿ. ಮಡ್ಡಿ ಮಾತನಾಡಿ, ಜಾಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕನ್ನಡ ಭಾಷೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಇರುವ ಅಂಗಡಿ–ಮುಂಗಟ್ಟುಗಳ ನಾಮಫಲಕಗಳನ್ನು ಕನ್ನಡದಲ್ಲಿ ಬರೆಯುವಂತೆ ಸಂಬಂಧಪಟ್ಟವರು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಕಾರ್ಯಕ್ರಮದಲ್ಲಿ ಉಪಸ್ಥಿತಿ:ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹನುಮಂತಿ ಶಿವಬಸಪ್ಪ ರಾಮ ಪಾಳಿ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಲಕ್ಷ್ಮಿ ಅಷ್ಟಗಿ, ಉಪಾಧ್ಯಕ್ಷ ವೀರೇಶ ಅರಕೇರಾ, ಗ್ರಾಮ ಪಂಚಾಯಿತಿ ಸದಸ್ಯರಾದ ಅಬ್ದುಲ್ ರಹಮಾನ್, ತಿಮ್ಮಣ್ಣ ನಾಯಕ ದಿವಾನ್, ಕರವೇ ತಾಲೂಕು ಅಧ್ಯಕ್ಷ ನಂದಪ್ಪ ಪಿ. ಮಡ್ಡಿ, ಜಾಲಹಳ್ಳಿ ಹೋಬಳಿ ಅಧ್ಯಕ್ಷ ತಮ್ಮಣ್ಣ ಹೆರುಂಡಿ, ವೀರೇಶ ಗೌಳಿ, ದುರುಗಪ್ಪ ರಾಮ ಪಾಳಿ, ಆಂಜನೇಯ ರಾಮ ಪಾಳಿ, ವೆಂಕೋಬ ಬಿಲ್ ಕಲೆಕ್ಟರ್, ಮುದರಂಗ ರಾಯಪ್ಪ, ಬಸವರಾಜ್, ಸೋಹೇಲ್ ಸೇ–ರಿದಂತೆ ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು ಹಾಗೂ ಇತರರು ಉಪಸ್ಥಿತ–ರಿದ್ದರು.33 ಸದಸ್ಯರ ಪೈಕಿ ಕೇವಲ ನಾಲ್ವರು ಹಾಜರು!ಜಾಲಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ಒಟ್ಟು 33 ಸದಸ್ಯರಿದ್ದು, 71ನೇ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮಕ್ಕೆ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಸೇರಿದಂತೆ ಕೇವಲ ನಾಲ್ವರು ಸದಸ್ಯರು ಮಾತ್ರ ಹಾಜರಾಗಿದ್ದರು. ನಾಡಹಬ್ಬದ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯ ಜನಪ್ರತಿನಿಧಿಗಳು ಗೈರಾಗಿರುವುದು ಸಾರ್ವಜನಿಕರ ಗಮನ ಸೆಳೆಯಿತು.ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ**

ಕಾರುಣ್ಯಾಶ್ರಮದ ಆಶ್ರಯದಾತರುಗಳೊಂದಿಗೆ ಕನ್ನಡ ರಾಜ್ಯೋತ್ಸವ ಆಚರಿಸಿದ ಪಿ.ಎಸ್.ಐ. ಗುರುರಾಜ

❏ ನೈಜ್ಯ ದೆಸೆ ನ್ಯೂಸ್



ಸಿಂಧನೂರು – ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯ ಪಿ.ಎಸ್.ಐ.ಗಳಾದ ಗುರುರಾಜ್. ಟಿ. ಅವರು 71ನೇ ಕನ್ನಡ ರಾಜ್ಯೋತ್ಸವವನ್ನು ನಗರದ ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದ ಆಶ್ರಯದಾತರುಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಿ ಆಶ್ರಮದ ಎಲ್ಲಾ ಆಶ್ರಯದಾತರುಗಳನ್ನು ಪರಿಚಯಿಸಿಕೊಂಡು ಆತ್ಮಸ್ಥೈರ್ಯ ತುಂಬಿ ಆಶ್ರಮದ ಎಲ್ಲಾ ಕೋಣೆಗಳಲ್ಲಿ ವೀಕ್ಷಿಸಿ ಕಾರುಣ್ಯ ಸಂಸ್ಥೆಯ ಸೇವೆಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಈ ಕಾರ್ಯಕ್ರಮದಲ್ಲಿ ಆಶ್ರಮದ ವತಿಯಿಂದ ಕನ್ನಡ ರಾಜ್ಯೋತ್ಸವ ಅಂಗವಾಗಿ ಪಿಎ□□□ ಗಳಾದ ಗುರುರಾಜ್.ಟಿ. ಹಾಗೂ 2025 ನೇ ಸಾಲಿನ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರು ಕಲಾವಿದರಾದ ನಾರಾಯಣಪ್ಪ ಮಾಡಸಿರವಾರ. ಮತ್ತು ಕಸಬಾ ಲಿಂಗಸಗೂ–ರಿನ ಸಪ್ತಗಿರಿ ಶ್ರೇಷ್ಠಿ ಇವರುಗಳನ್ನು ಆಶ್ರಮದ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು. ನಂತರ ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯ ಪಿಎ□□□ ಗಳಾದ ಗುರುರಾಜ್. ಟಿ.ಮಾತನಾಡಿ ಕಾರುಣ್ಯಾಶ್ರಮದ ಮೂಲಭೂತ ಸೌಲಭ್ಯಕ್ಕಾಗಿ ನಮ್ಮ ಸ್ನೇಹಿತರೊಂದಿಗೆ ಸಹಕರಿಸುತ್ತೇನೆ. ಮತ್ತು ವಿಶೇಷವಾಗಿ ಕಾರುಣ್ಯ ಆಶ್ರಮವು ಮಾನವೀಯತೆಯ ಮಂದಿರವಾಗಿ ಅದೆಷ್ಟೋ ಅನಾಥ ನೊಂದ ಜೀವಿಗಳಿಗೆ ಬದುಕು ಕಟ್ಟಿಕೊಟ್ಟು ಮಾಡುತ್ತಿರುವ ಕಾರ್ಯ ಶ್ಲಾಘನೀಯ ಈ ಸೇವಾ ಕಾರ್ಯಕ್ಕೆ ನಾನು ವೈಯಕ್ತಿಕವಾಗಿ ಮತ್ತು ನನ್ನ ಸ್ನೇಹ ಬಳಗದೊಂದಿಗೆ ಸಹಾಯ ಸಹಕಾರ ಮಾಡುತ್ತೇನೆ. ಗ್ರಾಮೀಣ ಪ್ರದೇಶದಲ್ಲಿ ಹುಟ್ಟಿಕೊಂಡಿರುವ ಈ ಸಂಸ್ಥೆ ನಗರ ಪ್ರದೇಶದಲ್ಲಿ ಕೈಗೆತ್ತಿಕೊಂಡು ಮಾಡುತ್ತಿರುವ ಈ ಸೇವೆ ನಾಡಿನ ಜನರ ಪ್ರೀತಿಗೆ ಪಾತ್ರವಾಗಿದೆ. ಹರೇಟನೂರಿನ ಚನ್ನಬಸಯ್ಯ ಸೇವೆ ಅನೇಕರಿಗೆ ಮಾದರಿಯಾಗಿದೆ.ಇಂದು ಕನ್ನಡ ರಾಜ್ಯೋತ್ಸವವನ್ನು ನನ್ನ ಸಾರ್ಥ–ಕ ದಿನವಾಗಿದೆ ಎಂದು ಮಾತನಾಡಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ನಾರಾಯಣಪ್ಪ ಮಾಡಸಿರವಾರ ಸಂಸ್ಥಾಪಕ ಅಧ್ಯಕ್ಷರು ಶ್ರೀಮತಿ ಮಲ್ಲಮ್ಮ ಮಾಡಸಿರವಾರ ಸಾಮಾಜಿಕ ಸಾಂಸ್ಕೃತಿಕ ಸೇವಾ ಟ್ರಸ್ಟ್(ರಿ) ಮಾಡ ಶಿರವಾರ. ಜಂಬಣ್ಣ ಕಲಾವಿದರು.' ದುಗ್ಗಪ್ಪ ಮಲ್ಲಾಪುರ ಪತ್ರಕರ್ತರು ಸಿಂಧನೂರು. ದ್ಯಾಮೇಶ ಪೊಲೀಸ ಇಲಾಖೆ. ಅಮರೇಗೌಡ ಪೊಲೀಸ್ ಇಲಾಖೆ.ಸಪ್ತಗಿರಿ ಶ್ರೇಷ್ಠಿ ಕಸಬಾ ಲಿಂಗಸೂಗೂರು. ಅಲ್ಲಾಭಕ್ಷ ಕಸಬಾ ಲಿಂಗಸುಗೂರು ವಿನೋದ ಕಸಬಾ ಲಿಂಗಸೂಗೂರು. ಅಭಿಷೇಕ ಕಸಬಾ ಲಿಂಗಸೂಗೂರು. ಸಿಕಂದರ್ ಮಾಬುಸಾ ಕಸಬಾ ಲಿಂಗಸೂಗೂರು. ರಮೇಶ ಕಸಬಾ ಲಿಂಗಸುಗೂರು. ಕುಪ್ಪಣ್ಣ ಕಸಬಾ ಲಿಂಗಸೂಗೂರು. ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸಯ್ಯಸ್ವಾಮಿ ಹಿರೇಮಠ. ಸದಸ್ಯರಾದ ಸುಜಾತ ಹಿರೇಮಠ. ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ.ಮರಿಯಪ್ಪ. ವಿದ್ಯಾಶ್ರೀ.ಶಂಕ್ರಮ್ಮ. ಶರಣು ಸ್ವಾಮಿ. ಬಸವ ಸ್ವಾಮಿ.ಹಾಗೂ ಅನೇಕರು ಉಪಸ್ಥಿತರಿದ್ದರು.

ಜನತಾ ಕಾಲೋನಿ ಸರ್ಕಾರಿ ಶಾಲೆಯಲ್ಲಿ 71ನೇ ಕನ್ನಡ ರಾಜ್ಯೋತ್ಸವ ಆಚರಣೆ

❏ ನೈಜ್ಯ ದೆಸೆ ನ್ಯೂಸ್



ಜಾಲಹಳ್ಳಿ: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಜನತಾ ಕಾಲೋನಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ 71ನೇ ಕನ್ನಡ ರಾಜ್ಯೋತ್ಸವ ದಿನಾಚರಣೆಯನ್ನು ಸಡಗರ ಹಾಗೂ ಸಂಭ್ರಮದಿಂದ ಆಚ–ರಿಸಲಾಯಿತು.ಕಾರ್ಯಕ್ರಮದ ಆರಂಭದಲ್ಲಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ನಂತರ ಎಸ್‌ಡಿಎಂಸಿ ಅಧ್ಯಕ್ಷ ಖುರ್ಶಿದ್ ಪಟೇಲ್ ಹಾಗೂ ಶಾಲೆಯ ಮುಖ್ಯೋಪಾಧ್ಯಾಯರಾದ ಉಲ್ಫೇತುನಿಸ್ಸಾ ಅವರು ಧ್ವಜಾರೋಹಣ ನೆರವೇರಿಸುವ ಮೂಲಕ ಕಾರ್ಯಕ್ರಮಕ್ಕೆ ವಿದ್ಯುಕ್ತ ಚಾಲನೆ ನೀಡಿದರು.ಶಾಲೆಯ ಮುಖ್ಯೋಪಾಧ್ಯಾಯರು ಕಾರ್ಯಕ್ರಮಕ್ಕೆ ಆಗಮಿಸಿದ ಎಸ್‌ಡಿಎಂಸಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಮುಖ್ಯ ಅತಿಥಿಗಳು, ಸಹಶಿಕ್ಷಕರು, ಅತಿಥಿ ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಶಿಕ್ಷಕೇತರ ಸಿಬ್ಬಂದಿಯನ್ನು ಆತ್ಮೀಯವಾಗಿ ಸ್ವಾಗತಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಎಸ್‌ಡಿಎಂಸಿ ಅಧ್ಯಕ್ಷ ಖುರ್ಶಿದ್ ಪಟೇಲ್ ಅವರು ಕನ್ನಡ ನಾಡು–ನುಡಿಯ ಮಹತ್ವ ಹಾಗೂ ಕನ್ನಡ ರಾಜ್ಯೋತ್ಸವದ ಹಿನ್ನೆಲೆಯ ಕುರಿತು ಪ್ರೇರಣಾದಾಯಕ ಮಾತುಗಳನ್ನಾಡಿದರು. ಕನ್ನಡ ಭಾಷೆ, ನಾಡು, ನುಡಿ, ಜಲ ರಕ್ಷಣೆ ಪ್ರತಿಯೊಬ್ಬರು ಜವಾಬ್ದಾರಿ ಯಿಂದ ನಡೆದು ಕೊಳ್ಳಬೇಕೆಂದು ಹೇಳಿದರು ಜಾಲಹಳ್ಳಿ ಹೋಬಳಿ ಕರವೇ ಅಧ್ಯಕ್ಷ ತಮ್ಮಣ್ಣ ಹೆರುಂಡಿ ಅವರು ಮಾತನಾಡಿ, ಕನ್ನಡ ಭಾಷೆಯ ಉಳಿವು, ಬೆಳವಣಿಗೆ ಹಾಗೂ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಪ್ರತಿಯೊಬ್ಬರೂ ಸಹಕಾರ ನೀಡಬೇಕು ಎಂದು ತಿಳಿಸಿದರು. ಗಣ್ಯರ ಉಪಸ್ಥಿತಿ:** ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಉಲ್ಫೇತುನಿಸ್ಸಾ, ಕರವೇ ತಾಲೂಕು ಅಧ್ಯಕ್ಷ ನಂದಪ್ಪ ಪಿ. ಮಡ್ಡಿ, ಜಾಲಹಳ್ಳಿ ಹೋಬಳಿ ಅಧ್ಯಕ್ಷ ತಮ್ಮಣ್ಣ ಹೆರುಂಡಿ, ಊರಿನ ಮುಖಂಡರಾದ ರಾಜ್ ಮೊಹಮ್ಮದ್ ಸುರ್ನೋಬತ್, ಪತ್ರಕರ್ತ ಖಾಜಾ ಹುಸೇನ್ ಬಾಬಾ, ಅತಿಥಿ ಶಿಕ್ಷಕ ಸೋಮಣ್ಣ ನಾಯಕ, ಎಸ್‌ಡಿಎಂಸಿ ಉಪಾಧ್ಯಕ್ಷ ಶಿವಪ್ಪ ಅಂಜಳ್, ಸದಸ್ಯೆ ಮೀನಾಕ್ಷಿ ರಂಗಪ್ಪ ಗಾಜಲಿನ್ನಿ, ಅತಿಥಿ ಸಿಬ್ಬಂದಿಗಳಾದ ಮಲ್ಲಮ್ಮ ಹಾಗೂ ದೊಡ್ಡಮ್ಮ ಯಲ್ಲಮ್ಮ ಸೇರಿದಂತೆ ಊರಿನ ಗಣ್ಯರು, ಶಿಕ್ಷಕರು ಮತ್ತು ಶಿಕ್ಷಕೇತರ ಸಿಬ್ಬಂದಿ ಉಪಸ್ಥಿತರಿದ್ದರು.ವಿದ್ಯಾರ್ಥಿಗಳು ಹಾಗೂ ಗಣ್ಯರ ಪಾಲ್ಗೊಳ್ಳುವಿಕೆಯಿಂದ ಕಾರ್ಯಕ್ರಮವು ಸಂಭ್ರಮದಿಂದ ನಡೆಯಿತು.ವರದಿ: ಖಾಜಾ ಹುಸೇನ್ ಬಾಬಾ, ಪತ್ರಕರ್ತರು, ಜಾಲಹಳ್ಳಿ.

ಕಂಪ್ಲಿ : ಜಂಡೇವು ಜುಲುಸ್ ಮೆರವಣಿಗೆ: ಮೆಹೆಬೂಬ್ ಸುಬಾನಿ ಗ್ಯಾರವಿ ಪ್ರಯುಕ್ತ ಭಕ್ತಿ ಸೌಹಾರ್ದತೆಯ ಸಂಗಮ

❏ ನೈಜ್ಯ ದೆಸೆ ನ್ಯೂಸ್



ಕಂಪ್ಲಿ: ಪಟ್ಟಣದ 18ನೇ ವಾರ್ಡಿನಲ್ಲಿ ಪವಿತ್ರ ಮೆಹಬೂಬ್ ಸುಬಾನಿ ಗ್ಯಾರವಿ ಶರೀಫ್' ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಧಾರ್ಮಿಕ ಜಂಡೇವು ಜುಲುಸ್ ಮೆರವಣಿಗೆಯು ಅತ್ಯಂತ ಅದ್ದೂರಿಯಾಗಿ ಹಾಗೂ ಶ್ರದ್ಧಾ ಭಕ್ತಿಭಾವದಿಂದ ನೆರವೇರಿತು. ಸೂಫಿ ಸಂತ ಹಜರತ್ ಶೇಖ್ ಅಬ್ದುಲ್ ಖಾದಿರ್ ಜಿಲಾನಿ (ಮೆಹಬೂಬ್ ಸುಭಾನಿ) ಅವರ ಸ್ಮರಣಾರ್ಥ ಆಚರಿಸಲಾಗುವ ಈ ಪವಿತ್ರ ಹಬ್ಬದ ನಿಮಿತ್ಯ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಧ್ವಜದ (ಜಂಡೇವು) ಮತ್ತು ಆಕರ್ಷಕವಾಗಿ ಅಲಂಕ–ರಿಸಲ್ಪಟ್ಟ ಪವಿತ್ರ 'ಪೀರು' (ಅಲಂ) ಭವ್ಯ ಮೆರವಣಿಗೆಯನ್ನು ನಡೆಸಲಾಯಿತು. ಪಟ್ಟಣದ ಪ್ರಮುಖ ವೃತ್ತಗಳು ಹಾಗೂ ರಸ್ತೆಗಳನ್ನು ಮೂಲಕ ಧಾರ್ಮಿಕ ಧ್ವಜದ ಮೆರವಣಿಗೆ ಜರುಗಿತು. ಸೌಹಾರ್ದತೆಯ ಸಂಕೇತವಾಗಿ ಮೆರವಣಿಗೆಯುದ್ದಕ್ಕೂ ವಿವಿಧ ಧರ್ಮಗಳ ಮುಖಂಡರು ಹಾಗೂ ಸ್ಥಳೀಯ ನಿವಾಸಿಗಳು ಭಾಗವಹಿಸಿದರು.ರೋಮಾಂಚನ ಮೂಡಿಸಿದ 'ತಾಷಾರಾಂಡಲ್' ವಾದ್ಯ*ವೈಭವ:* ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಿದ್ದ ಸಾಂಪ್ರದಾಯಿಕ 'ತಾಷಾರಾಂಡಲ್' ವಾದ್ಯಮೇಳ. ತಾಷಾರಾಂಡಲ್ ವಾದ್ಯಗಾರರ ಕೈಚಳಕ ಮತ್ತು ಗಂಭೀರ ನಾದದ ಸದ್ದು ಇಡೀ ವಾರ್ಡ್ ಅದ್ಯಂತ ಪ್ರತಿಧ್ವನಿಸಿತು. ವಾದ್ಯದ ತೀವ್ರ ಹಾಗೂ ಭಕ್ತಿಪ್ರಧಾನ ರಿದಮ್‌ಗೆ ತಕ್ಕಂತೆ ಜುಲುಸ್‌ನಲ್ಲಿದ್ದ ಯುವಕರು ಮತ್ತು ಭಕ್ತಾದಿಗಳು ಭಕ್ತಿಪರವಶರಾಗಿದ್ದರು.ತಾಷಾರಾಂಡಲ್‌ನ ಈ ಗಂಭೀರ ನಾದವು ಇಡೀ ಪರಿಸರದಲ್ಲಿ ಮಂತ್ರಮುಗ್ಧ ವಾತಾವರಣವನ್ನು ಸೃಷ್ಟಿಸಿ, ನೆರೆದಿದ್ದ ಸಾರ್ವಜನಿಕರಲ್ಲಿ ರೋಮಾಂಚನ ಉಂಟುಮಾಡಿತು.ಸಹಬಾಳ್ವೆಯ ಸಂದೇಶ:*"ಗ್ಯಾರವಿ ಹಬ್ಬವು ಕೇವಲ ಒಂದು ಧರ್ಮದ ಆಚರಣೆಯಾಗಿ ಉಳಿಯದೆ, ವಾರ್ಡಿನ ಸರ್ವಧರ್ಮೀಯರ ಸಮ್ಮುಖದಲ್ಲಿ ಸೌಹಾರ್ದತೆಯ ಸಂಕೇತವಾಗಿ ಮೂಡಿಬಂದಿದೆ. ನಮ್ಮ ಊರಿನಲ್ಲಿ ಇಂತಹ ಧಾರ್ಮಿಕ ಕಾರ್ಯಕ್ರಮಗಳು ಸಮಾಜದಲ್ಲಿ ಸಹೋದರತೆ ಹಾಗೂ ಸಹಬಾಳ್ವೆಯನ್ನು ಇನ್ನಷ್ಟು ಗಟ್ಟಿಗೊಳಿಸುತ್ತವೆ" ಎಂದು ವಾರ್ಡಿನ ಹಿರಿಯ ಮುಖಂಡರು ಶ್ಲಾಘಿ–ಸಿದರು.ಈ ಸಂದರ್ಭದಲ್ಲಿ ಪುರಸಭಾ ಸದಸ್ಯ ಎಂ. ಉಸ್ಮಾನ್, ಹಾಫೀಜ್ ಮೊಹಮ್ಮದ್ ಸಿರಾಜುದ್ದೀನ್, ಮೋಹಿದ್ದಿನ್, ಅಧ್ಯಕ್ಷ ಹೊನ್ನೂರ್ ವಲಿ, ಎಂ. ಮಹಮ್ಮದ್ ಗೌಸ್, ಟಿ. ಮೊಹಮ್ಮದ್ ಗೌಸ್, ಎಚ್. ನವಬಸಾಬ್, ಮೌಲಾ ಹುಸೇನ್, ಜಾಫರ್, ಸಮೀರ್ ಭಾಷಾ ಸೇರಿದಂತೆ ಕಾರ್ಯಕ್ರಮದ ಯಶಸ್ಸಿಗೆ ಕಾರಣರಾದ ವಾರ್ಡಿನ ಯುವಕರು, ಹಿರಿಯರು ಮತ್ತು ಸರ್ವ ಧರ್ಮದ ಭಕ್ತಾದಿಗಳು ಇದ್ದರು. ಮೆರವಣಿಗೆ ಜರಗಿದ ನಂತರ ಸುಣ್ಣಗಾರ ಓಣಿ 18 ವಾರ್ಡಿನ ಜಂಡೇಕಟ್ಟೆ ಬಳಿ ಪೂಜಾ ಕಾರ್ಯಕ್ರಮ ನಡೆದ ನಂತರ ಸರ್ವರಿಗೂ ಪ್ರಸಾದ ವ್ಯವಸ್ಥೆಯನ್ನು ಆಯೋಜಿಸಲಾಗಿ–ತ್ತು.ವರದಿ : ಜಿಲಾನಸಾಬ್ ಬಡಿಗೇರ್

ಕಂಪ್ಲಿಯಲ್ಲಿ ಕರವೇ ನಾರಾಯಣಗೌಡ ಬಣದಿಂದ 71ನೇ ಕನ್ನಡ ರಾಜ್ಯೋತ್ಸವ ಆಚರಣೆ: ಹೊಸಕೋಟೆ ಜಗದೀಶ್‌ರಿಂದ ಧ್ವಜಾರೋಹಣ

❏ ನೈಜ್ಯ ದೆಸೆ ನ್ಯೂಸ್



ಕಂಪ್ಲಿ: ಪಟ್ಟಣದ ಪುರಸಭೆ ಮುಂಭಾಗದ ನೋಂದಣಿ ಕಚೇರಿಯ ಪಕ್ಕದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಟಿ.ಎನ್. ನಾರಾಯಣ ಗೌಡ ಬಣ) ತಾಲ್ಲೂಕು ಘಟಕದ ವತಿಯಿಂದ 71ನೇ ಕರ್ನಾಟಕ ರಾಜ್ಯೋತ್ಸವವನ್ನು ಭಾನುವಾರ ಅತ್ಯಂತ ಸಡಗರ–ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಹೊಸಕೋಟೆ ಜಗದೀಶ್ ಅವರು, "ಕನ್ನಡ ನಾಡು, ನುಡಿ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವಲ್ಲಿ ಪ್ರತಿಯೊಬ್ಬ ಕನ್ನಡಿಗನ ಜವಾಬ್ದಾರಿ ಹಿರಿದಾಗಿದೆ" ಎಂದರು. ಕರವೇ ಕಂಪ್ಲಿ ತಾಲ್ಲೂಕು ಅಧ್ಯಕ್ಷರಾದ ಬಳೆ ಮಲ್ಲಿಕಾರ್ಜುನ ಅವರು ಮಾತನಾಡಿ, ಸಂಘಟನೆಯು ಸದಾ ಕನ್ನಡದ ಹಿತರಕ್ಷಣೆಗಾಗಿ ಶ್ರಮಿಸುತ್ತಿದೆ ಮತ್ತು ಮುಂದಿನ ದಿನಗಳಲ್ಲೂ ತಾಲ್ಲೂಕಿನಲ್ಲಿ ಕನ್ನಡ ಜಾಗೃತಿಯ ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕಂಪ್ಲಿ ಪುರಸಭಾ ಪ್ರಭಾರಿ ಮುಖ್ಯಾಧಿಕಾರಿ ಬಿ. ಮಲ್ಲಿಕಾರ್ಜುನ, ರಾಜ್ಯ ಅಪೆಕ್ಸ್ ಬ್ಯಾಂಕಿನ ನಿರ್ದೇಶಕರಾದ ಮೂಕಯ್ಯಸ್ವಾಮಿ, ನಗರ ಘಟಕ ಅಧ್ಯಕ್ಷ ಜಂಗ ನಾಗರಾಜ್, ತಾಲೂಕು ಉಪಾಧ್ಯಕ್ಷರಾದ ಅಕ್ಕಿ ಜಿಲಾನ್,ವಿ ಬಿ ನಾಗರಾಜ್, ಶ್ರೀಕಾಂತ್ ಸಂತೋಷ, ರಘು ನಾಯಕ್, ಕಟ್ಟೆ ವಿನಯ್, ತಿಪ್ಪಾಯಿಸ್ವಾಮಿ, ಎಸ್. ಎಂ. ಗುರುಪ್ರಸನ್ನ ಸೇರಿದಂತೆಸಂಘಟನೆಯ ಪ್ರಮುಖ ಪದಾಧಿಕಾರಿಗಳು, ಸ್ಥಳೀಯ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದು, ಕನ್ನಡ ಮಾತೆ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ವರದಿ : ಜಿಲಾನಸಾಬ್ ಬಡಿಗೇರ್

ವಚನ ದರ್ಶನ

ಎನ್ನ ಕಾಯವ ದಂಡಿಗೆಯ ಮಾಡಯ್ಯಾ ಎನ್ನ ಶಿರವ ಸೋರೆಯ ಮಾಡಯ್ಯಾ ಎನ್ನ ನರವ ತಂತಿಯ ಮಾಡಯ್ಯಾ, ಎನ್ನ ಬೆರಳ ಕಡ್ಡಿಯ ಮಾಡಯ್ಯಾ ಬತ್ತೀಸ ರಾಗವ ಹಾಡಯ್ಯಾ, ಉರದಲೊತ್ತಿ ಬಾರಿಸು,ಕೂಡಲಸಂಗಮದೇವಾ

12 ನೇ ಶತಮಾನದ ಶರಣರಾದ ವಿಶ್ವಗುರು ಬಸವಣ್ಣನವರ ಅತ್ಯಂತ ಪ್ರಸಿದ್ಧವಾದ ಹಾಗೂ ಸುಂದರವಾದ ವಚನವಾಗಿದೆ. ಈ ವಚನದಲ್ಲಿ ವಿಶ್ವಗುರು ಬಸವಣ್ಣನವರು ತಮ್ಮ ಸಂಪೂರ್ಣ ದೇಹವನ್ನು ದೇವರ ಸೇವೆಗೆ ಅರ್ಪಿಸಿಕೊಳ್ಳುವಂತೆ ಮತ್ತು ದೇವನೇ ಅದನ್ನು ನುಡಿಸುವಂತೆ ಬೇಡಿಕೊಂಡಿದ್ದಾರೆ.ಈ ವಚನದಲ್ಲಿ ಬಸವಣ್ಣನವರು ತಮ್ಮನ್ನು ತಾವು ದೇವರ ಕೈಯಲ್ಲಿರುವ 'ದಂಡಿಗೆ' ಇಂದಿನ ವೀಣೆಯಂತಹ ಒಂದು ತಂತಿ ವಾದ್ಯ ಮಾಡಲು ಕೇಳಿಕೊಳ್ಳುತ್ತಿದ್ದಾರೆ.ದೇಹ ಮತ್ತು ಶಿರ ನನ್ನ ದೇಹವನ್ನು ವಾದ್ಯದ ದಂಡವನ್ನಾಗಿಯೂ, ನನ್ನ ತಲೆಯನ್ನು ವಾದ್ಯಕ್ಕೆ ಬಳಸುವ ಒಣ-ಗಿದ ಸೋರೆಕಾಯಿಯ ಬುರುಡೆಯನ್ನಾಗಿಯೂ ಮಾಡು.ನರ ಮತ್ತು ಬೆರಳು: ನನ್ನ ದೇಹದ ನರಗಳನ್ನು ಆ ವಾದ್ಯದ ತಂತಿಗಳನ್ನಾಗಿ ಮಾಡು ಮತ್ತು ನನ್ನ ಬೆರಳುಗಳನ್ನೇ ಅದನ್ನು ನುಡಿಸುವ ಕಡ್ಡಿಯನ್ನಾಗಿ ಪರಿವರ್ತಿಸು.ಸಂಗೀತದ ನಾದ: ಹೇ ಕೂಡಲಸಂಗಮದೇವ, ನನ್ನನ್ನು ನಿನ್ನ ಎದೆಗೆ ಒತ್ತಿ ಹಿಡಿದು, ನಿನಗೆ ಇಷ್ಟ ಬಂದಂತೆ ಮೂವತ್ತೆರಡು ಬತ್ತೀಸ ರಾಗಗಳನ್ನು ಮಂಜುಳವಾಗಿ ನುಡಿಸು. ನನ್ನ ಜೀವನದ ಪ್ರತಿ ಕ್ಷಣವೂ ನಿನ್ನ ನಾದಮಯವಾಗಿರಲಿ ಎಂಬುದು ಇದರ ಆಶಯವಾಗಿದೆ.ಅಂದರೆ, "ನನ್ನಲ್ಲಿ ಯಾವುದೇ ಅಹಂಕಾರ ಉಳಿಯಬಾರದು, ನಾನು ಸಂಪೂರ್ಣವಾಗಿ ನಿನ್ನ ಇಚ್ಛೆಯಂತೆ ನಡೆಯುವ ನಿಮಿತ್ತ ಮಾತ್ರನಾಗಬೇಕು" ಎಂಬ ಪರಮ ಭಕ್ತಿಯ ಶರಣಾಗತಿಯ ಭಾವ ಇಲ್ಲಿದೆ. ಇಂಥಹ ವಚನಗಳು ಮನುಕುಲಕ್ಕೆ ದಾರಿದೀಪವಾಗಿವೆ. ನಾವು ನೀವು ವಚನದ ದಾರಿಯಲ್ಲಿ ಸಾಗೋಣ ಶರಣು ಶರಣಾರ್ಥಿಗಳು.

ಪಂಪಯ್ಯಸ್ವಾಮಿ ಸಾಲಿಮಠ
ಅಂತರಗಂಗಿ-ಸಿಂಧನೂರು. 998094144

ಮುಕ್ಕುಂದಾ ಪ್ರೌಢಶಾಲೆಯಲ್ಲಿ ವಿಜೃಂಭಣೆಯಿಂದ ಜರುಗಿದ ಕನ್ನಡ ರಾಜ್ಯೋತ್ಸವ ಆಚರಣೆ

❑ ನೈಜ್ಯ ದೆಸೆ ನ್ಯೂಸ್



ಮುಕ್ಕುಂದಾ:ಸ್ಥಳೀಯ ಮುಕ್ಕುಂದಾ ಪ್ರೌಢಶಾಲೆಯಲ್ಲಿ ಕನ್ನಡ ನಾಡು-ನುಡಿಯ ಸಂಭ್ರಮದ ಪ್ರತೀಕವಾದ 'ಕನ್ನಡ ರಾಜ್ಯೋತ್ಸವ'ವನ್ನು ಅತ್ಯಂತ ಸಡಗರ, ಉತ್ಸಾಹ ಹಾಗೂ ಗೌರವಯುತವಾಗಿ ಆಚರಿಸಲಾಯಿತು. ಕಾರ್ಯಕ್ರಮದ ಆರಂಭದಲ್ಲಿ ಕನ್ನಡ ನಾಡಿನ ಅಧಿದೇವತೆಯಾದ ಶ್ರೀ ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ನಂತರ ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷರಾದ ಶ್ರೀ ಭಾಷಾ ಅಂಗಡಿ ಅವರು ಧ್ವಜಾರೋಹಣ ನೆರವೇರಿಸಿ ಮಾತನಾಡುತ್ತಾ, "ಕನ್ನಡ ಭಾಷೆಯು ಶ್ರೀಮಂತ ಇತಿಹಾಸ ಮತ್ತು ಸಾಹಿತ್ಯ ಪರಂಪರೆಯನ್ನು ಹೊಂದಿದೆ. ಇಂದಿನ ಯುವ ಪೀಳಿಗೆ ಕನ್ನಡದ ಉಳಿವು ಮತ್ತು ಬೆಳವಣಿಗೆಗೆ ಶ್ರಮಿಸಬೇಕು ಹಾಗೂ ಮಾತೃಭಾಷೆಗೆ ಹೆಚ್ಚಿನ ಆದ್ಯತೆ ನೀಡಬೇಕು" ಎಂದು ಕರೆ ನೀಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯ ಗುರುಗಳಾದ ಶ್ರೀ ಹೊಳಿಯಪ್ಪ ಅವರು ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಶಾಲಾ ಹಂತದಿಂದಲೇ ಕನ್ನಡ ಸಾಹಿತ್ಯ, ಕಲೆ ಹಾಗೂ ಸಂಸ್ಕೃತಿಯನ್ನು ಮೈಗೂಡಿಸಿಕೊಳ್ಳಬೇಕು. ನಾಡಿನ ಹಿರಿಯ ಸಾಧಕರ ಮತ್ತು ಕವಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳುವ ಮೂಲಕ ಕನ್ನಡಾಂಬೆಯ ಕೀರ್ತಿಯನ್ನು ಪಸರಿಸಬೇಕು ಎಂದು ಕಿವಿಮಾತು ಹೇಳಿದರು.ರಾಜ್ಯೋತ್ಸವದ ಅಂಗವಾಗಿ ಶಾಲೆಯ ವಿದ್ಯಾರ್ಥಿಗಳು ನಾಡು-ನುಡಿಯನ್ನು ಕೊಂಡಾಡುವ ದೇಶಭಕ್ತಿ ಗೀತೆಗಳನ್ನು ಹಾಡಿ, ಆಕರ್ಷಕ ನೃತ್ಯಗಳ ಮೂಲಕ ನೆರೆದಿದ್ದವರ ಮನಸೂರೆಗೊಂಡರು. ಶಾಲಾ ಆವರಣದಲ್ಲಿ ಕನ್ನಡ ಧ್ವಜಗಳು ರಾರಾಜಿಸುತ್ತಿದ್ದು, ವಿದ್ಯಾರ್ಥಿಗಳ "ಜೈ ಕನ್ನಡಾಂಬೆ", "ಕರ್ನಾಟಕ ಮಾತೆ ಕೀ ಜೈ" ಎಂಬ ಘೋಷಣೆಗಳು ಇಡೀ ವಾತಾವರಣವನ್ನು ಕನ್ನಡಮಯವಾಗಿಸಿದವು. ಕನ್ನಡ ಭಾಷೆ ಮತ್ತು ಸಂಸ್ಕೃತಿಯ ರಕ್ಷಣೆಗಾಗಿ ನಾವೆಲ್ಲರೂ ಬದ್ಧರಾಗಿರಬೇಕೆಂಬ ಪ್ರತಿಜ್ಞೆಯನ್ನು ಈ ವೇಳೆ ಕೈಗೊಳ್ಳಲಾಯಿತು.ಈ ಅದ್ಧೂರಿ ಕಾರ್ಯಕ್ರಮದಲ್ಲಿ ಪ್ರಮುಖ ಮುಖಂಡರಾದ ಶ್ರೀ ಯಲ್ಲಪ್ಪ ರಾರವಿ, ಶ್ರೀ ಚಾಗೇಶ, ಶ್ರೀ ಶರಣಪ್ಪ ಬಾಳಿಗಾರ್ ಅವರು ವಿಶೇಷ ಆಹ್ವಾನಿತರಾಗಿ ಭಾಗವಹಿಸಿ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು. ಹಾಗೆಯೇ ಶಾಲೆಯ ಶಿಕ್ಷಕ ವೃಂದದವರಾದ ಶ್ರೀ ಮೌನೇಶ, ಶ್ರೀ ಮಾನಪ್ಪ, ಶ್ರೀ ರಾಜೇಶ್, ಶ್ರೀ ರೋಹಿಣಿ ಅವರು ಕಾರ್ಯಕ್ರಮದ ಅಚ್ಚುಕಟ್ಟು ನಿರ್ವಹಣೆಯಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು. ಕಾರ್ಯಕ್ರಮದಲ್ಲಿ ಊರಿನ ಗಣ್ಯರು, ಪೋಷಕರು ಹಾಗೂ ಶಾಲೆಯ ನೂರಾರು ವಿದ್ಯಾರ್ಥಿಗಳು ಉಪಸ್ಥಿತ-ರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

ಕೇವಲ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲು ಅಧಿಕಾರಿಗಳ ಆದೇಶ; ಧ್ವಜಾರೋಹಣಕ್ಕೆ ಪಟ್ಟು ಹಿಡಿದ ಕರವೇ ಮುಖಂಡರು, ಅಧಿಕಾರಿಗಳ ವಿರುದ್ಧ ಹೋರಾಟದ ಎಚ್ಚರಿಕೆ

❑ ನೈಜ್ಯ ದೆಸೆ ನ್ಯೂಸ್



ಜಾಲಹಳ್ಳಿ, ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿಯಮಿತದಲ್ಲಿ 71ನೇ ಕರ್ನಾಟಕ ರಾಜ್ಯೋತ್ಸವವನ್ನು ಧ್ವಜಾರೋಹಣ ಮಾಡದೆ, ಕೇವಲ ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಆಚ-ರಿಸಿರುವುದು ವಿವಾದಕ್ಕೆ ಕಾರಣವಾಗಿದೆ.ಸಹಕಾರ ಸಂಘದ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳ ಸೂಚನೆಯಂತೆ ಸಂಘದ ಕಾರ್ಯದರ್ಶಿ ಶರಣು ಅವರು ತಾಯಿ ಭುವನೇಶ್ವರಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ರಾಜ್ಯೋತ್ಸವ ಆಚರಣೆ ನಡೆಸಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ಖುರ್ಶಿದ್ ಪಟೇಲ್ ಹಾಗೂ ನಿರ್ದೇಶಕರಾದ ಈಶಣ್ಣ ಕಾಟಮಳ್ಳಿ, ವೆಂಕಣ್ಣ ಯರಕಮಟ್ಟಿ ಮತ್ತು ನವೀನ್ ಪಾಟೀಲ್ ಉಪಸ್ಥಿತರಿದ್ದರು.ಧ್ವಜಾರೋಹಣ-ಕ್ಕೆ ಕರವೇ ಮುಖಂಡರ ಪಟ್ಟರಾಜ್ಯೋತ್ಸವದ ಅಂಗವಾಗಿ ಧ್ವಜಾರೋಹಣ ನೆರವೇರಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ತಾಲೂಕು ಅಧ್ಯಕ್ಷ ನಂದಪ್ಪ ಪಿ. ಮಡ್ಡಿ ಹಾಗೂ ಜಾಲಹಳ್ಳಿ ಹೋಬಳಿ ಅಧ್ಯಕ್ಷ ತಮ್ಮಣ್ಣ ಹೆರುಂಡಿ ಅವರು ಪಟ್ಟು ಹಿಡಿದರು. ಆದರೆ, ಧ್ವಜಾರೋಹಣ ಮಾಡಲು ಯಾವುದೇ ಆದೇಶ ಬಂದಿಲ್ಲ ಎಂದು ಕಾರ್ಯದರ್ಶಿ ಶರಣು ತಿಳಿಸಿದರು.ಈ ಕು-ರಿತು ತಾಲೂಕು ವಿಸ್ತರಣಾಧಿಕಾರಿ ಅಮರೇಶ್ ಅವರನ್ನು ಕರವೇ ಮುಖಂಡರು ಪ್ರಶ್ನಿಸಿದಾಗ, ಧ್ವಜಾರೋಹಣಕ್ಕೆ ಸಂಬಂಧಿಸಿದಂತೆ ಯಾವುದೇ ಆದೇಶ ಬಂದಿಲ್ಲ ಎಂದು ದೂರವಾಣಿ ಮೂಲಕ ತಿಳಿಸಿದರು. ಇದಕ್ಕೆ ಆಕ್ಷೇಪ ವ್ಯಕ್ತಪಡಿಸಿದ ಮುಖಂಡರು, ಜಿಲ್ಲಾ ಉಪನಿಬಂಧಕರಾದ ಶೈಖ್ ಹುಸೇನ್ ಅವರೊಂದಿಗೆ ದೂರವಾಣಿ ಮೂಲಕ ಮಾತನಾಡಿದರು.ಈ ವೇಳೆ ಜಿಲ್ಲೆಯಲ್ಲಿ ಯಾವುದೇ ಪ್ರಾಥಮಿಕ ಸಹಕಾರ ಸಂಘದಲ್ಲಿ ಧ್ವಜಾರೋಹಣ ಮಾಡುವುದಿಲ್ಲ. ಕೇವಲ ತಾಯಿ ಭುವನೇಶ್ವ-ರಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ ಎಂದು ಕರವೇ ಮುಖಂಡರು ಹೇಳಿದರು.ಅಧಿಕಾರಿಗಳ ವಿರುದ್ಧ ದೂರು ದಾಖಲಿಸುವ ಎಚ್ಚರಿಕೆ:ನಂತರ ಪತ್ರಕರ್ತರೊಂದಿಗೆ ಮಾತನಾಡಿದ ಕರವೇ ತಾಲೂಕು ಅಧ್ಯಕ್ಷ ನಂದಪ್ಪ ಪಿ. ಮಡ್ಡಿ ಹಾಗೂ ಜಾಲಹಳ್ಳಿ ಹೋಬಳಿ ಅಧ್ಯಕ್ಷ ತಮ್ಮಣ್ಣ ಹೆರುಂಡಿ ಅವರು, ಧ್ವಜಾರೋಹಣಕ್ಕೆ ಅವಕಾಶ ನೀಡದಿರುವ ಜಿಲ್ಲಾ ಉಪನಿಬಂಧಕ ಶೈಖ್ ಹುಸೇನ್ ಹಾಗೂ ತಾಲೂಕು ವಿಸ್ತರಣಾಧಿಕಾರಿ ಅಮರೇಶ್ ಅವರ ವಿರುದ್ಧ ದೂರು ದಾಖಲಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಕನ್ನಡ ರಾಜ್ಯೋತ್ಸವದಂದು ಧ್ವಜಾರೋಹಣ ನಡೆಸಲು ಅವಕಾಶ ನೀಡದಿರುವ ಅಧಿಕಾರಿಗಳ ನಡೆ ಖಂಡನೀಯ. ಅಧಿಕಾರಿಗಳ ಈ ಬೇಜವಾಬ್ದಾರಿತನವನ್ನು ಕರವೇ ಸಹಿಸುವುದಿಲ್ಲ. ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾದ್ಯಂತ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು. ವರದಿ: ಖಾಜಾ ಹುಸೇನ್ ಬಾಬಾ, ಜಾಲಹಳ್ಳಿ**

ಸಿರವಾರದಲ್ಲಿ ಸಂಭ್ರಮದಿಂದ 70ನೇ ಕನ್ನಡ ರಾಜ್ಯೋತ್ಸವ ಆಚರಣೆ: ಭುವನೇಶ್ವರಿ ದೇವಿಯ ಭವ್ಯ ಮೆರವಣಿಗೆ

❑ ನೈಜ್ಯ ದೆಸೆ ನ್ಯೂಸ್



ನ:01 ಸಿರವಾರ ತಾಲೂಕು ಆಡಳಿತದ ವತಿಯಿಂದ ಪಟ್ಟಣದಲ್ಲಿ 70ನೇ ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಹಾಗೂ ವಿಜೃಂಭಣೆಯಿಂದ ಆಚರಿಸಲಾಯಿತು. ಕನ್ನಡ ರಾಜ್ಯೋತ್ಸವದ ಅಂಗವಾಗಿ ಪಟ್ಟಣದಲ್ಲಿ ಶ್ರೀ ಭುವನೇಶ್ವರಿ ದೇವಿಯ ಭಾವಚಿತ್ರವನ್ನು ಅಲಂಕರಿಸಿದ ವಾಹನದಲ್ಲಿ ಇರಿಸಿ ಭವ್ಯ ಮೆರವಣಿಗೆ ನಡೆಸಲಾಯಿತು. ಮೆರವಣಿಗೆಯಲ್ಲಿ ಕನ್ನಡಪರ ಸಂಘಟನೆಗಳ ಮುಖಂಡರು, ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಪಟ್ಟಣದ ಆಟೋ ಚಾಲಕರು ಸೇರಿದಂತೆ ನೂರಾರು ಕನ್ನಡಾಭಿಮಾನಿಗಳು ಪಾಲ್ಗೊಂಡಿದ್ದರು. ಮೆರವಣಿಗೆಯುದ್ದಕ್ಕೂ ಕನ್ನಡದ ಹಳದಿ-ಕೆಂಪು ಬಣ್ಣದ ಶಾಲುಗಳು ಮತ್ತು ಧ್ವಜಗಳು ಗಮನ ಸೆಳೆದವು.ನಂತರ ನಡೆದ ವೇದಿಕೆ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ, ಭುವನೇಶ್ವರಿ ದೇವಿಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಯಿತು. ಕನ್ನಡ ನಾಡು, ನುಡಿ, ಭಾಷೆ ಮತ್ತು ಸಂಸ್ಕೃತಿಯ ಮಹತ್ವವನ್ನು ಸಾರುವ ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರು ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ತಾಲೂಕು ಆಡಳಿತದ ಅಧ್ಯಕ್ಷರು, ಉಪಾಧ್ಯಕ್ಷರು, ತಹಶೀಲ್ದಾರ್, ಪಟ್ಟಣ ಪಂಚಾಯತಿಯ ಅಧ್ಯಕ್ಷರು, ಉಪಾಧ್ಯಕ್ಷರು, ಮುಖ್ಯಾಧಿಕಾರಿ ಹಾಗೂ ಎಲ್ಲಾ ಸದಸ್ಯರು, ಕನ್ನಡಪರ ಸಂಘಟನೆಗಳ ಮುಖಂಡರು, ಶಿಕ್ಷಕ ವೃಂದ, ಗುರುಹಿರಿಯರು, ಆಟೋ ಚಾಲಕರು, ಹಿರಿಯರು, ಕಿರಿಯರು ಹಾಗೂ ವಿವಿಧ ಇಲಾಖೆಗಳ ಸಿಬ್ಬಂದಿ ವರ್ಗದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದರು.ಕನ್ನಡ ರಾಜ್ಯೋತ್ಸವದ ನಿಮಿತ್ತ ಸಿರವಾರ ಪಟ್ಟಣದಾದ್ಯಂತ ಕನ್ನಡಮಯ ವಾತಾವರಣ ನಿರ್ಮಾಣವಾಗಿದ್ದು, ಕನ್ನಡಾಭಿಮಾನಿಗಳ ಸಂಭ್ರಮ ಎಲ್ಲೆಡೆ ಮನೆಮಾಡಿತ್ತು.

ವರಟಿಗೇರಾ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಅದ್ದೂರಿಯಾಗಿ 71ನೇ ಕರ್ನಾಟಕ ರಾಜ್ಯೋತ್ಸವ ಆಚರಣೆ

❑ ನೈಜ್ಯ ದೆಸೆ ನ್ಯೂಸ್



ಜಾಲಹಳ್ಳಿ, ನ. 1: ರಾಯಚೂರು ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಪಟ್ಟಣದ ವರಟಿಗೇರಾ ಪ್ರದೇಶದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ 71ನೇ ಕರ್ನಾಟಕ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚ-ರಿಸಲಾಯಿತು.ಕಾರ್ಯಕ್ರಮದಲ್ಲಿ ಖಆಒಅ ಅಧ್ಯಕ್ಷ ರಂಗಣ್ಣ ತ್ಯಾಪ್ಲಿ ಹಾಗೂ ಶಾಲೆಯ ಮುಖ್ಯಶಿಕ್ಷಕಿ ಲಲಿತಾ ಅವರು ಧ್ವಜಾರೋಹಣ ನೆರವೇರಿಸಿದರು. ಬಳಿಕ ಶಾಲಾ ಮಕ್ಕಳು ರಾಷ್ಟ್ರಗೀತೆ ಹಾಗೂ ನಾಡಗೀತೆಯನ್ನು ಹಾಡಿದರು.ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಖಆಒಅ ಸದಸ್ಯ ಚನ್ನಬಸವ ಮಾಲಿ ಪಾಟೀಲ್ ಅವರು, ಕನ್ನಡ ನಾಡು, ನುಡಿ, ನೆಲ, ಜಲ ಹಾಗೂ ಭಾಷೆಯ ರಕ್ಷಣೆಗೆ ಪ್ರತಿಯೊಬ್ಬರೂ ಬದ್ಧರಾಗಿರಬೇಕು. ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಹೇಳಿದರು.ಈ ಸಂದರ್ಭದಲ್ಲಿ ಊರಿನ ಪ್ರಮುಖರಾದ ಶಿವನಗೌಡ ವಂದಲಿ (ತಾಲೂಕು ಜೆಡಿಎಸ್ ಪರಿಶಿಷ್ಟ ಪಂಗಡ ಘಟಕದ ಅಧ್ಯಕ್ಷರು), ಮಂಜುನಾಥ್ ಪಾಟೀಲ್, ರಮೇಶ್ ಮಾಸ್ಟರ್, ರಮೇಶ್ ಗಾಂಜಿ, ಮಲ್ಲೇಶ್ ಮಸ್ಕಿ, ನರಸಣ್ಣ ಡೆಂಗಿ, ರಂಗಪ್ಪ ಹಿರೇಮನಿ , SDMC ಸದಸ್ಯರಾದ ಚನ್ನಬಸವ ಮಾಲಿ ಪಾಟೀಲ್, ರಂಗಣ್ಣ ಹೊಸಮನಿ, ಶಿವರಾಜ್ ಹಿರೇಮನಿ , ಕೊಂಡಯ್ಯ ತ್ಯಾಪ್ಲಿ, ಯಲ್ಲಪ್ಪ ಕಟ್ಟಿಮನಿ, ಭೀಮಣ್ಣ ಗುಂಡಗುರ್ತಿ, ಶಿಕ್ಷಕರಾದ ಸಿದ್ದಣ್ಣ, ಮಲ್ಲಮ್ಮ, ವೆಂಕಟೇಶ್, ವೆಂಕಟೇಶ್ ದೊರೆ, ಶಿವಮನ್ಯಾ ತ್ಯಾಪ್ಲಿ, ಸುಜಾತ, ವಿಜಯಲಕ್ಷ್ಮಿ ಸೇ-ರಿದಂತೆ ಶಾಲೆಯ ಸಿಬ್ಬಂದಿ ವರ್ಗದವರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.ವರದಿ: ಖಾಜಾ ಹುಸೇನ್ ಬಾಬಾ, ಪತ್ರಕರ್ತರು, ಜಾಲಹಳ್ಳಿ.

ದೇವದುರ್ಗದಲ್ಲಿ ಕರವೇ (ಪ್ರವೀಣ್ ಶೆಟ್ಟಿ ಬಣ) ವತಿಯಿಂದ ಅದ್ದೂರಿ ಕನ್ನಡ ರಾಜ್ಯೋತ್ಸವ ಆಚರಣೆ

❑ ನೈಜ್ಯ ದೆಸೆ ನ್ಯೂಸ್



ದೇವದುರ್ಗ, ನ. 1:** ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕ ಹಾಗೂ ನಗರ ಘಟಕ (ಪ್ರವೀಣ್ ಶೆಟ್ಟಿ ಬಣ) ವತಿಯಿಂದ ನವೆಂಬರ್ 1ರಂದು 71ನೇ ಕರ್ನಾಟಕ ರಾಜ್ಯೋತ್ಸವವನ್ನು ಅದ್ದೂರಿಯಾಗಿ ಆಚರಿಸಲಾಯಿತು.ಬೆಳಿಗ್ಗೆ 8 ಗಂಟೆಗೆ ಬೈಕ್ ರ್ಯಾಲಿ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಜೈರುದ್ದೀನ್ ಪಾಷಾ ವೃತ್ತದಿಂದ ಅಂಬೇಡ್ಕರ್ ವೃತ್ತದ ಮಾರ್ಗವಾಗಿ ಪುರಸಭೆ ಕಚೇರಿ ಸಮೀಪದಲ್ಲಿರುವ ಧ್ವಜಸ್ತಂಭದವರೆಗೆ ಬೈಕ್ ರ್ಯಾಲಿ ಹಾಗೂ ಮೆರವಣಿಗೆ ನಡೆಸಿ, ನಂತರ ಧ್ವಜಾರೋಹಣ ನೆರವೇರಿಸಲಾಯಿತು.ಕಾರ್ಯಕ್ರಮದಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯ ತಾಲೂಕು ಅಧ್ಯಕ್ಷ ಬಸವರಾಜ ಗೋಪಾಳಪುರ, ಉಪಾಧ್ಯಕ್ಷ ಉಸ್ಮಾನ್ ಪಾಷಾ, ತಾಲೂಕು ಕಾರ್ಯಾಧ್ಯಕ್ಷ ಸುರೇಶ್ ಪಾಟೀಲ, ತಾಲೂಕು ಕಾರ್ಯದರ್ಶಿ ಅಮರೇಶ್ ಪಾಟೀಲ, ನಗರ ಘಟಕದ ಅಧ್ಯಕ್ಷ ಹುಸೇನ್ ಬಾಷಾ, ಉಪಾಧ್ಯಕ್ಷರಾದ ಉಸ್ಮಾನ್ ಬೂವಾಜಿ ಹಾಗೂ ಅಯ್ಯೂಬ್ ಖಾನ್, ಸದಸ್ಯರಾದ ಬಾಬು ಬುವಾಜಿ, ಬಾಬು, ಆಸಿಫ್, ಹಸೇನ್, ಜೈರುದ್ದೀನ್ ಸೇರಿದಂತೆ ಹಲವಾರು ಕಾರ್ಯಕರ್ತರು ಭಾಗವಹಿಸಿದ್ದರು.ನೂತನ ವಿದ್ಯಾರ್ಥಿ ಘಟಕ ಸ್ಥಾಪನೆ ಇದೇ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ವತಿಯಿಂದ ದೇವದುರ್ಗದಲ್ಲಿ ನೂತನ ನಗರ ವಿದ್ಯಾರ್ಥಿ ಘಟಕವನ್ನು ಸ್ಥಾಪಿಸಿ ಪದಾಧಿಕಾ-ರಿಗಳನ್ನು ನೇಮಕ ಮಾಡಲಾಯಿತು.ವಿದ್ಯಾರ್ಥಿ ಘಟಕದ ಅಧ್ಯಕ್ಷರಾಗಿ ಸಲ್ಮಾನ್, ಉಪಾಧ್ಯಕ್ಷರಾಗಿ ಬಾಬು. ಎಂ., ಗೌರವಾಧ್ಯಕ್ಷರಾಗಿ ಹಸೇನ್, ಪ್ರಧಾನ ಕಾರ್ಯದರ್ಶಿಯಾಗಿ ಜೈರುದ್ದೀನ್, ಸಹಕಾರ್ಯದರ್ಶಿಗಳಾಗಿ ಬಸವರಾಜ ಮತ್ತು ಎಂ.ಡಿ. ಮುಜಾಮಿಲ್, ಪ್ರಚಾರ ಸಮಿತಿ ಕಾರ್ಯದರ್ಶಿಯಾಗಿ ಜೈರುದ್ದೀನ್ ಅವರನ್ನು ನೇಮಕ ಮಾಡಲಾಯಿತು. ಸದಸ್ಯರಾಗಿ ಶಿವರಾಜ್ ನೀಲವಂಜಿ ಹಾಗೂ ಅಳವಳೆಪ್ಪ ಅವರನ್ನು ಆಯ್ಕೆ ಮಾಡಲಾಯಿತು.ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಹಾಗೂ ಪೆನ್ನುಗಳನ್ನು ವಿತರಿಸುವ ಮೂಲಕ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸಲಾಯಿತು. ಬೈಕ್ ರ್ಯಾಲಿ, ಧ್ವಜಾರೋಹಣ ಹಾಗೂ ವಿದ್ಯಾರ್ಥಿ ಘಟಕದ ಸ್ಥಾಪನೆಯೊಂದಿಗೆ ಕಾರ್ಯಕ್ರಮವನ್ನು ಸಂಭ್ರಮದಿಂದ ನಡೆಸಲಾಯಿತು.ವರದಿ: ಖಾಜಾ ಹುಸೇನ್ ಬಾಬಾ, ಪತ್ರಕರ್ತರು, ಜಾಲಹಳ್ಳಿ.

ತೀವ್ರ ತಗ್ಗುಗುಂಡಿ ಪಿಡಬ್ಲ್ಯೂಡಿ ಇಲಾಖೆ ನಿರ್ಲಕ್ಷ, ಪಿಡಿಒ ಲಕ್ಷ್ಮಣ ಮರಮ ವ್ಯವಸ್ಥೆ

❑ ನೈಜ್ಯ ದೆಸೆ ನ್ಯೂಸ್



ಹಾಲಾಪೂರ: ಹಾಲಾಪೂರ ದಿಂದ ಕವಿತಾಳ ಪಟ್ಟಣಕ್ಕೆ ರಸ್ತೆ ಸಂಪರ್ಕ ಕಲ್ಪಿಸುವ ಮುಖ್ಯ ಹೆದ್ದಾರಿ ಕಳೆದ ಎರಡು ವರ್ಷಗಳಿಂದ ದೊಡ್ಡಮಟ್ಟದ ತೆಗ್ಗು ಗುಂಡಿ ಗಳಿಂದ ರಸ್ತೆ ಸಂಪೂರ್ಣ ಹದಗೆಟ್ಟು ಹಾಳಾಗಿದ್ದರು ಯಾರು ಇದನ್ನು ಸರಿಪಡಿಸುವ ಕೆಲಸ ಮಾಡುತ್ತಿಲ್ಲ, ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ರಸ್ತೆಯ ಬಗ್ಗೆ ಕಿ0ಚಿತ್ತು ಸರಿಪಡಿಸುವ ಕೆಲಸ ಮಾಡುತ್ತಿಲ್ಲ, ಹೀಗಾಗಿ ಗ್ರಾಮಸ್ಥರು ರಸ್ತೆಯ ಮೇಲೆ ದೊಡ್ಡಮಟ್ಟದ ಕಲ್ಲುಗಳನ್ನು ಹಾಕಿ ಆಕ್ರೋಶ ವ್ಯಕ್ತಪಡಿಸಿದಾಗ, ವಿಷಯ ತಿಳಿದ ಗ್ರಾಮ ಪಂಚಾಯತಿ ಪಿಡಿಒ ಲಕ್ಷ್ಮಣ ಕಳಕಳಿಯಿಂದ ತಕ್ಷಣವೇ ಕೆಂಪು ಮರಮ ಹಾಕಿಸಿ ತಾತ್ಕಾಲಿಕವಾಗಿ ಸ್ವಲ್ಪ ಮಟ್ಟಿಗೆ ತೆಗ್ಗು ಗುಂಡಿ ಮುಚ್ಚುವ ಕಾರ್ಯ ಮಾಡಿದ್ದಾರೆ, ಆದ-ರೆ ಸಂಬಂಧಿಸಿದ ಲೋಕೋಪಲ್ಲಿಗೆ ಇಲಾಖೆ ಅಧಿಕಾರಿಗಳು ನಿರ್ಲಕ್ಷಕ್ಕೆ ಜಾರಿದ್ದು ತೀವ್ರ ನಾಚಿಕೆ ತರುವ ವಿಚಾರವಾಗಿದೆ, ನಿತ್ಯ ಈ ರಸ್ತೆಯ ಮೂಲಕ ರಾಯಚೂರು ಮಾನ್ವಿ ಮಸ್ಕಿ ಸಿಂಧನೂರು ಪಟ್ಟಣಗಳಿಗೆ ಶಾಲಾ ಕಾಲೇಜು ಇನ್ನಿತರ ವಿಷಯವಾಗಿ ನೂರಾರು ವಾಹನಗಳು ಪ್ರಯಾಣಿಸುತ್ತೇವೆ ಎಲ್ಲರೂ ಕೂಡ ಜೀವ ಭಯದಲ್ಲಿ ಪ್ರಯಾಣ ಮಾಡುತ್ತಿರುವುದು ದುರಂತವೇ ಸರಿ, ಈಗಲಾದರೂ ಸಂಬಂಧಿಸಿದ ಜನಪ್ರತಿನಿಧಿಗಳು, ಲೋಕೋಪಯೋಗಿ ಇಲಾಖೆ ಅಧಿಕಾರಿಗಳು ತೀವ್ರ ಹದೇಗಟ್ಟಿರುವ ರಸ್ತೆ ಸರಿಪಡಿಸಲು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಫೆಡರಲ್ ಪಬ್ಲಿಕ್ ಶಾಲೆಯಲ್ಲಿ 71ನೇ ಕನ್ನಡ ರಾಜ್ಯೋತ್ಸವ ಸಂಭ್ರಮ

❑ ನೈಜ್ಯ ದೆಸೆ ನ್ಯೂಸ್



ರಾಯಚೂರು: ಯರಮರಸ್ ಕ್ಯಾಂಪ್‌ನಲ್ಲಿರುವ ಫೆಡರಲ್ ಪಬ್ಲಿಕ್ ಸಿಬಿಎಸ್‌ಇ ಶಾಲೆಯಲ್ಲಿ 71ನೇ ಕನ್ನಡ ರಾಜ್ಯೋತ್ಸವವನ್ನು ನವೆಂಬರ್ 1ರಂದು ಅತ್ಯಂತ ಸಂಭ್ರಮದಿಂದ ಆಚ-ರಿಸಲಾಯಿತು.ಭಾನುವಾರ ಬೆಳಿಗ್ಗೆ 8:30ಕ್ಕೆ ಶಾಲಾ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಮಹಮ್ಮದ್ ಅಬ್ದುಲ್ ಹೈ ಫಿರೋಜ್, ಕಾರ್ಯನಿರ್ವಾಹಕ ನಿರ್ದೇಶಕಿ ಕು. ಶ್ರೀಲೇಖಾ ಹಾಗೂ ಪ್ರಾಂಶುಪಾಲರಾದ ಎಂ.ಡಿ. ನೌಶಾದ್ ಅವರು ಕನ್ನಡಾಂಬೆಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ನೆರವೇರಿಸುವ ಮೂಲಕ ಧ್ವಜಾರೋಹಣ ಮಾಡಿದರು. ನಂತರ ನಾಡಗೀತೆ ಹಾಗೂ ರಾಷ್ಟ್ರಗೀತೆಯನ್ನು ಹಾಡಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸ್ಥೆಯ ಅಧ್ಯಕ್ಷ ಮಹಮ್ಮದ್ ಅಬ್ದುಲ್ ಹೈ ಫಿರೋಜ್ ಅವರು, 1956ರ ನವೆಂಬರ್ 1ರಂದು ಭಾಷಾವಾರು ಪ್ರಾಂತ್ಯಗಳ ಪುನರ್‌ರಚನೆಯ ಮೂಲಕ ಕನ್ನಡ ಮಾತನಾಡುವ ಪ್ರದೇಶಗಳನ್ನು ಒಗ್ಗೂಡಿಸಿ ಮೈಸೂರು ರಾಜ್ಯವನ್ನು ರಚಿಸಲಾಯಿತು. ನಂತರ 1973ರ ನವೆಂಬರ್ 1ರಂದು ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರುನಾಮಕರಣ ಮಾಡಲಾಯಿತು. ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ ಹಾಗೂ ನಾಡಿನ ಏಕೀಕರಣಕ್ಕಾಗಿ ಶ್ರಮಿಸಿದ ಮಹನೀಯರ ಕೊಡುಗೆಯನ್ನು ಸ್ಮ-ರಿಸುವುದು ಪ್ರತಿಯೊಬ್ಬ ಕನ್ನಡಿಗನ ಕರ್ತವ್ಯವಾಗಿದೆ ಎಂದು ಮಕ್ಕಳಿಗೆ ತಿಳಿಸಿದರು.ಕನ್ನಡ ಭಾಷೆಯ ಇತಿಹಾಸ, ಆದಿಕವಿ ನೃಪತುಂಗನ ಸಾಹಿತ್ಯಿಕ ಕೊಡುಗೆ ಹಾಗೂ ಕನ್ನಡ ನಾಡಿನ ಹಿರಿಮೆ-ಗ-ರಿಮೆಯನ್ನು ವಿದ್ಯಾರ್ಥಿಗಳಿಗೆ ಪರಿಚಯಿಸಿದರು. ಬಳಿಕ ವಿದ್ಯಾರ್ಥಿಗಳ ಸಾಂಸ್ಕೃತಿಕ ಹಾಗೂ ನೃತ್ಯ ಕಾರ್ಯಕ್ರಮಗಳಿಗೆ ಚಾಲನೆ ನೀಡಿದರು. ಕಾರ್ಯನಿರ್ವಾಹಕ ನಿರ್ದೇಶಕಿ ಕು. ಶ್ರೀಲೇಖಾ ಮಾತನಾಡಿ, ಕನ್ನಡ ನಾಡಿನ ನಾಡಗೀತೆಯನ್ನು ರಚಿಸಿದ ರಾಷ್ಟ್ರಕವಿ ಕುವೆಂಪು ಅವರ ಸಾಹಿತ್ಯ ಸೇವೆಯನ್ನು ಸ್ಮರಿಸಿದರು. ಕನ್ನಡ ಭಾಷೆಯ ಸೌಂದರ್ಯ, ಸಂಸ್ಕೃತಿ ಮತ್ತು ಪರಂಪರೆಯ ಬಗ್ಗೆ ವಿದ್ಯಾರ್ಥಿಗಳಲ್ಲಿ ಅಭಿಮಾನ ಬೆಳೆಸುವ ಅಗತ್ಯವಿದೆ ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಪ್ರಾಂಶುಪಾಲರಾದ ಎಂ.ಡಿ. ನೌಶಾದ್, ಕಚೇರಿಯ ಮುಖ್ಯ ಅಧೀಕ್ಷಕರಾದ ಗಧಾರ ವೆಂಕಟೇಶ ಸಾಗರ ಸೇರಿದಂತೆ ಸಂಸ್ಥೆಯ ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದರು.ವಿದ್ಯಾರ್ಥಿಗಳ ಸಾಂಸ್ಕೃತಿ-ಕ ಕಾರ್ಯಕ್ರಮಗಳು ಕನ್ನಡ ರಾಜ್ಯೋತ್ಸವದ ಸಂಭ್ರಮಕ್ಕೆ ಮತ್ತಷ್ಟು ಮೆರುಗು ನೀಡಿದವು.

OWNER, PUBLISHER, PRINTER BY IRFAN K H NO. 3/117, BALAGANUR, SINDHANOOR, RAICHUR-584138 KARNATAKA AND PRINTED AT SHIVANI PRINTERS, HULKOTI, NEW COURT, OPPOSITE PLOT NO. 28 RS NO. 312/3B, GARAG COMPLEX, GADAG-582101